ಸಂಪುಟ : 9 ಸಂಚಿಕೆ 238 ಪುಟ : 4 ಬೆಲೆ: 3.00 ಬುಧವಾರ ಅಕ್ಟೋಬರ್ 30 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ


ವಾಸ್ತವ, ವಸ್ತುನಿಷ್ಠ, ವಿಭಿನ್ನ...

VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 9 Issue : 238 Pages : 4 Price : 3.00 Wednesday October 30 2024 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಉಸ್ತುವಾರಿ ಸಚಿವ ಎಚ್. ಕೆ. ಪಾಟೀಲರ ಜಿಲ್ಲಾ ಪ್ರವಾಸ



■ ವಿಜಯಸಾಕ್ಷಿ ಸುದ್ದಿ, ಗದಗ

ರಾಜ್ಯ ಕಾನೂನು, ನ್ಯಾಯ , ಮಾನವ ಹಕ್ಕುಗಳು, ಸಂಸದೀಯ ವ್ಯವಹಾರ, ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ. ಎಚ್. ಕೆ.ಪಾಟೀಲ ಅವರು ಅಕ್ಟೋಬರ್ 30 ರಂದು ಜಿಲ್ಲೆಯಲ್ಲಿ ಪ್ರವಾಸ ಕೈಗೊಳ್ಳಲಿದ್ದು, ವಿವರ ಕೆಳಗಿನಂತಿದೆ.

ಅಕ್ಟೋಬರ್ 30 ರಂದು ಬೆ. 11 ಗಂಟೆಗೆ ಗಂಗಿಮಡಿಯ ಸರಕಾರಿ ಉರ್ದು ಹಿರಿಯ ಪ್ರಾಥಮಿಕ ಗಂಡು ಮಕ್ಕಳ ಶಾಲೆ ನಂ. 7ರ ನೂತನ 2 ಕೊಠಡಿಗಳ ಉದ್ಘಾಟನಾ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವರು. ಮಧ್ಯಾಹ್ನ 11.30 ಗಂಟೆಗೆ ಗದಗನ ರಾಮನಗರದ ಸರಕಾರಿ ಹಿರಿಯ ಪ್ರಾಥಮಿಕ ಕನ್ನಡ ಗಂಡು ಮಕ್ಕಳ ಶಾಲೆ ನಂ. 18 ರ ನೂತನ –1 ಕೊಠಡಿಯ ಉದ್ಘಾಟನೆ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವರು. ಮಧ್ಯಾಹ್ನ 12 ಗಂಟೆಗೆ ನಗರದ ಪತ್ರಿಕಾ ಭವನದಲ್ಲಿ ಪತ್ರಿಕಾಗೋಷ್ಠಿ ನಡೆಸುವರು.

ಅದೇ ದಿನ ಸಂಜೆ 4.30 ಗಂಟೆಗೆ ಶಿರುಂಜ ಗ್ರಾಮದಲ್ಲಿ ಸರಕಾರಿ ಪ್ರೌಢಶಾಲೆಯ ನೂತನ 3 ಕೊಠಡಿಗಳ ಉದ್ಘಾಟನೆ, ಸಂಜೆ 4.45 ಗಂಟೆಗೆ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಯ ನೂತನ 3 ಕೊಠಡಿಗಳ ಉದ್ಘಾಟನೆ ಹಾಗೂ ಸಂಜೆ 5 ಗಂಟೆಗೆ ಹೊಸೂರು ಗ್ರಾಮ ಹೊಸೂರ ಪ್ಲಾಟ್‌ದ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಯ ನೂತನ 3 ಕೊಠಡಿಗಳ ಉದ್ಘಾಟನೆ, ಸಂಜೆ 5.30 ಗಂಟೆಗೆ ಮುಳಗುಂದದಲ್ಲಿ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಯ ನೂತನ 3 ಕೊಠಡಿಗಳ ಉದ್ಘಾಟನೆ ಹಾಗೂ ಸಂಜೆ 5.45 ಗಂಟೆಗೆ ಮುಳಗುಂದದಲ್ಲಿ ಮಾದರಿ ಕನ್ನಡ ಗಂಡು ಮಕ್ಕಳ ಶಾಲೆಯ ನೂತನ 1 ಕೊಠಡಿಯ ಉದ್ಘಾಟನಾ ಸಮಾರಂಭದಲ್ಲಿ ಪಾಲ್ಗೊಂಡು ಗದಗನಲ್ಲಿ ವಾಸ್ತವ್ಯ ಮಾಡುವರು ಎಂದು ಪ್ರಕಟಣೆ ತಿಳಿಸಿದೆ.

### 'ಬೇಟಿ ಬಚಾವೋ ಬೇಟಿ ಪಡಾವೋ' ಒಂದು ದಿನದ ಕಾರ್ಯಾಗಾರದಲ್ಲಿ ಸಿ.ಎಸ್. ಶಿವನಗೌಡ್ರ

# ಹೆಣ್ಣು ಮಕ್ಕಳ ರಕ್ಷಣೆ ಎಲ್ಲರ ಜವಾಬ್ದಾರಿ

■ ವಿಜಯಸಾಕ್ಷಿ ಸುದ್ದಿ, ಗದಗ

ಬಾಲ್ಯ ವಿವಾಹ ಮತ್ತು ಹೆಣ್ಣು ಭ್ರೂಣಹತ್ಯೆಗಳನ್ನು ತಡೆಯುವ ಮೂಲಕ ಹೆಣ್ಣು ಮಕ್ಕಳ ರಕ್ಷಣೆ ಪ್ರತಿಯೊಬ್ಬರ ಜವಾಬ್ದಾರಿಯಾಗಿದೆ ಎಂದು ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಸಿ.ಎಸ್. ಶಿವನಗೌಡ್ರ ತಿಳಿಸಿದರು.

ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಮಂಗಳವಾರ ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ಪೊಲೀಸ್ ಇಲಾಖೆ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಇವರ ಸಹಯೋಗದಲ್ಲಿ ಬೇಟಿ ಬಚಾವೋ ಬೇಟಿ ಪಡಾವೋ ಯೋಜನೆಯ ಜಿಲ್ಲಾ ಮತ್ತು ತಾಲೂಕು ಮಟ್ಟದ ಒಂದು ದಿನದ ಕಾರ್ಯಾಗಾರವನ್ನು ಉದ್ಘಾಟಿಸಿ ಅವರು ಮಾತನಾಡುತ್ತಿದ್ದರು.

> ಮಹಿಳಾ ಮತ್ತು ಮಕ್ಕಳ ಇಲಾಖೆಯ ಉಪನಿರ್ದೇಶಕಿ ಪದ್ಮಾವತಿ ಪ್ರಾಸ್ತಾವಿಕವಾಗಿ ಮಾತನಾಡಿ, ಲಿಂಗತಾರತಮ್ಯ ಹೋಗಲಾಡಿಸಲು ಬೇಟಿ ಬಚಾವೋ ಬೇಟಿ ಪಡಾವೋ ಯೋಜನೆ ಜಾರಿ ಮಾಡಲಾಯಿತು. ಹೆಣ್ಣು ಮಕ್ಕಳ ರಕ್ಷಣೆ ಮತ್ತು ಶಿಕ್ಷಣದ ಕುರಿತು ಅರಿವು ಮೂಡಿಸುವ ಕೆಲಸವನ್ನು ಅಂಗನವಾಡಿಗಳಲ್ಲಿ ಮಾಡಲಾಗುತ್ತಿದೆ ಎಂದು ತಿಳಿಸಿದರು.




ಈಗಿನ ದಿನಗಳಲ್ಲಿ ಹೆಣ್ಣುಮಕ್ಕಳು ಎಲ್ಲ ಕ್ಷೇತ್ರಗಳಲ್ಲಿಯೂ ತಮ್ಮ ಛಾಪು ಮೂಡಿಸಿದ್ದಾರೆ. ಹೆಣ್ಣುಮಕ್ಕಳಿಗೆ ಸರ್ಕಾರದ ವಿವಿಧ ಯೋಜನೆಗಳ ಸೌಲಭ್ಯಗಳ ಅರಿವು ಮೂಡಿಸುವುದು ಅವಶ್ಯಕವಾಗಿದೆ. ಹೆಣ್ಣು ಭ್ರೂಣಹತ್ಯೆ ತಡೆಗಟ್ಟಿ ಲಿಂಗತಾರತಮ್ಯ ತೊಲಗಿಸುವುದು, ಹೆಣ್ಣು ಮಕ್ಕಳಿಗೆ ಶಿಕ್ಷಣ ನೀಡುವದು ಈ ಯೋಜನೆಯ ಮುಖ್ಯ ಉದ್ದೇಶವಾಗಿದೆ. ಬಾಲ್ಯ ವಿವಾಹ ಮತ್ತು ಹೆಣ್ಣುಭ್ರೂಣ ಹತ್ಯೆಗಳನ್ನು ತಡೆಗಟ್ಟಲು ಎಲ್ಲ ಇಲಾಖೆಗಳ ಸಹಕಾರ ಅಗತ್ಯವಾಗಿದೆ. ಬಾಲ್ಯ ವಿವಾಹ ಪ್ರಕರಣ ಕಂಡು ಬಂದರೆ ವಿಳಂಬ ಮಾಡದೇ ಸೂಕ್ತ ಕ್ರಮ ಕೈಗೊಳ್ಳಬೇಕು. ಹೆಣ್ಣು ಮಕ್ಕಳ ದೌರ್ಜನ್ಯ ಹಾಗೂ ಕೌಟುಂಬಿಕ ದೌರ್ಜನ್ಯಗಳ ಕಂಡುಬಂದರೆ ನ್ಯಾಯಾಲಯಕ್ಕೆ ಅರ್ಜಿ ಸಲ್ಲಿಸಬೇಕು. ಆಗ ನೊಂದ ಮಹಿಳೆ ಸರ್ಕಾರದಿಂದ ಪರಿಹಾರ ಕಂಡುಕೊಳ್ಳಬಹುದು ಎಂದರು.

ಮಹಿಳಾ ಮತ್ತು ಮಕ್ಕಳ ಇಲಾಖೆಯ ಶ್ರೀಧರ ಪ್ರತಿಜ್ಞಾ ವಿಧಿ ಬೋಧಿಸಿದರು. ಇದೇ ಸಂದರ್ಭದಲ್ಲಿ ಬೇಟಿ ಬಚಾವೋ ಬೇಟಿ ಪಡಾವೋ ಯೋಜನೆಯ ಕರಪತ್ರಗಳನ್ನು ಬಿಡುಗಡೆಗೊಳಿಸಲಾಯಿತು. ಯುನೆಸ್ಕೋ ಸಂಸ್ಥೆಯ ಹರೀಶ ಜೋಗಿ ಅವರು ಸಂಪನ್ಮೂಲ ವ್ಯಕ್ತಿಗಳಾಗಿ ಆಗಮಿಸಿ ಮಾತನಾಡಿ, ಬಾಲ್ಯ ವಿವಾಹ ತಡೆಗಟ್ಟಲು ಇಲಾಖೆಯ ಅಧಿಕಾರಿಗಳು ತೀವ್ರಗತಿಯಲ್ಲಿ ಕೆಲಸ ಮಾಡಬೇಕು. ಬಾಲ್ಯವಿವಾಹದಿಂದ ಆಗುವ ದುಷ್ಪರಿಣಾಮಗಳ ಕುರಿತು ಅರಿವು ಮೂಡಿಸಬೇಕೆಂದು ವಿವರಿಸಿದರು.

> ಜಿಲ್ಲಾಧಿಕಾರಿ ಗೋವಿಂದರೆಡ್ಡಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿ, ಬೇಟಿ ಬಚಾವೋ ಬೇಟಿ ಪಡಾವೋ ಯೋಜನೆಯ ಯಶಸ್ಸಿಗೆ ವಿವಿಧ ಇಲಾಖೆಗಳ ಸಹಕಾರ ಅಗತ್ಯವಾಗಿದೆ. ಭ್ರೂಣಹತ್ಯೆ ತಡೆಗಟ್ಟಿ ಹೆಣ್ಣು ಮಗುವನ್ನು ಬಾಲ್ಯವಿವಾಹದಿಂದ ರಕ್ಷಿಸುವುದು ಆದ್ಯ ಕರ್ತವ್ಯವಾಗಿದೆ. ದೇಶದ ಅಭಿವೃದ್ಧಿಗೆ ಹೆಣ್ಣು ಮಕ್ಕಳು ಹಾಗೂ ಪುರುಷರು ಒಂದು ಪಕ್ಷಿಯ ಎರಡು ರೆಕ್ಕೆಗಳಿದ್ದಂತೆ. ಹೆಣ್ಣು ಮಕ್ಕಳಿಗೂ ಸಮಾನ ಅವಕಾಶ ನೀಡಿದಾಗ ಅಂತಹ ದೇಶ ಅಭಿವೃದ್ಧಿ ಕಾಣಲು ಸಾಧ್ಯವಾಗುತ್ತದೆ ಎಂದರು.

ಕಾರ್ಯಾಗಾರದಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್. ನೇಮಗೌಡ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಭರತ್ ಎಸ್, ಅಪರ ಜಿಲ್ಲಾಧಿಕಾರಿ ಅನ್ನಪೂರ್ಣ ಎಂ, ವಕೀಲರಾದ ಜೆ.ಸಿ. ರೇಷ್ಮೆ, ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಎಸ್.ಎಸ್. ನೀಲಗುಂದ, ಡಿವೈಎಸ್‌ಪಿ ಇನಾಮದಾರ, ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ರಫೀಕಾ ಹಳ್ಳೂರು ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿ ಹಾಗೂ ಸಿಬ್ಬಂದಿಗಳು ಹಾಜರಿದ್ದರು.

ಶ್ರೀಮತಿ ಪತ್ತಾರ ಪ್ರಾರ್ಥಿಸಿದರು. ಜಿಲ್ಲಾ ನಿರೂಪಣಾಧಿಕಾರಿ ರಾಧಾ ಜಿ.ಮಣ್ಣೂರ ಸ್ವಾಗತಿಸಿದರು. ಸುನಿತಾ ನಾಡಿಗೇರ ಕಾರ್ಯಕ್ರಮ ನಿರೂಪಿಸಿದರು.

## ಅರ್ಜಿ ಆಹ್ವಾನ

■ ವಿಜಯಸಾಕ್ಷಿ ಸುದ್ದಿ, ಗದಗ

ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ ಗದಗ ವಿಭಾಗದ ವ್ಯಾಪ್ತಿಗೆ ಬರುವ ವಿಭಾಗೀಯ ಕಾರ್ಯಾಗಾರ ಹಾಗೂ ಗದಗ, ರೋಣ, ಲಕ್ಷ್ಮೇಶ್ವರ, ಮುಂಡರಗಿ, ಶಿರಹಟ್ಟಿ ಘಟಕಗಳಲ್ಲಿ ಮೆಕ್ಯಾನಿಕ್ (ಡೀಸೆಲ್) ವೆಲ್ಡರ್, ಫಿಟ್ಟರ್, ಎಲೆಕ್ಟ್ರಿಷಿಯನ್ , ಎಂ. ವಿ. ಬಿ.ಬಿ. ವೃತ್ತಿಗಳಲಿ ಅರ್ಹ ಅಭ್ಯರ್ಥಿಗಳಿಂದ ಒಂದು ವರ್ಷದ ಶಿಶಿಕ್ಷು ತರಬೇತಿಗಾಗಿ ಅರ್ಜಿ ಆಹ್ವಾನಿಸಲಾಗಿದೆ. ಆಸಕ್ತ ಅಭ್ಯರ್ಥಿಗಳು www.apprenticeshipindia.gov.in ನಲ್ಲಿ ನೋಂದಣಿ ಮಾಡಿಕೊಂಡು ಸದರಿ ಪೋರ್ಟಲ್‌ನಿಂದ ಡಿವಿಜನಲ್ ಕಂಟ್ರೋಲ್‌ರ, ಎನ್ ಡಬ್ಲು ಕೆ ಆರ್ ಟಿ ಸಿ, ಗದಗ ಡಿವಿಜನ್ (EO 4162900081) ಈ ವಿಳಾಸಕ್ಕೆ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಿ ವಿಭಾಗೀಯ ಕಚೇರಿ, ವಾ.ಕ.ರ.ಸಾ.ಸಂಸ್ಥೆ ಗದಗ ವಿಭಾಗ ಇಲ್ಲಿ ನವೆಂಬರ್ 5 ರಂದು ಬೆ 10 ಗಂಟೆಗೆ ಕಚೇರಿ ವೇಳೆಯಲ್ಲಿ ಸೂಕ್ತ ದಾಖಲಾತಿಗಳೊಂದಿಗೆ ಸ್ವಂತ ಖರ್ಚಿನಲ್ಲಿ ನೇರ ಸಂದರ್ಶನಕ್ಕೆ ಹಾಜರಾಗತಕ್ಕದ್ದು ಎಂದು ಗದಗ ವಿಭಾಗದ ವಾ.ಕ.ರ.ಸಾ.ಸಂಸ್ಥೆಯ ವಿಭಾಗೀಯ ನಿಯಂತ್ರಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಜಿಲ್ಲಾಡಳಿತದಿಂದ ಬೆಳೆ ಹಾನಿ ಪ್ರದೇಶಕ್ಕೆ ಭೇಟಿ, ಪರಿಶೀಲನೆ

# ಹಾನಿ ಸಮೀಕ್ಷೆ ಕಾರ್ಯ ನಿಖರವಾಗಿರಲಿ

■ ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲಾಧಿಕಾರಿ ಗೋವಿಂದರೆಡ್ಡಿ, ಜಿ.ಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭರತ್ ಎಸ್ ಹಾಗೂ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್. ನೇಮಗೌಡ ಅವರು ಗದಗ ತಾಲೂಕಿನ ವಿವಿಧ ಪ್ರದೇಶಗಳಲ್ಲಿ ಅತಿವೃಷ್ಟಿಯಿಂದ ಬೆಳೆ ಹಾನಿಗೊಳಗಾದ ಪ್ರದೇಶಗಳಿಗೆ ಮಂಗಳವಾರ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಗದಗ ತಾಲೂಕಿನ ಸಂಭಾಪುರ, ಮುಳಗುಂದ ಸೇರಿದಂತೆ ವಿವಿಧ ಗ್ರಾಮಗಳ ಬೆಳೆ ಹಾನಿ ಪ್ರದೇಶಕ್ಕೆ ಭೇಟಿ ನೀಡಿ ಬೆಳೆ ಹಾನಿ ಪರಿಸ್ಥಿತಿಯನ್ನು ಅವಲೋಕಿಸಿದರು. ಬೆಳೆ ಹಾನಿಯಾದ ರೈತರಿಗೆ ಸರ್ಕಾರದ ಸಹಾಯಧನ ಸರಿಯಾಗಿ ತಲುಪಬೇಕು. ಈ ಬಗ್ಗೆ ಸರ್ಕಾರ ನೀಡಿರುವ ಮಾರ್ಗಸೂಚಿಯನ್ವಯ ಕೃಷಿ ಇಲಾಖೆ, ತೋಟಗಾರಿಕೆ ಇಲಾಖೆ ಹಾಗೂ ಕಂದಾಯ ಇಲಾಖೆಯ ಅಧಿಕಾರಿಗಳು ಜಂಟಿ ಸಮೀಕ್ಷೆ ಕೈಗೊಳ್ಳುವ ಮೂಲಕ ಅರ್ಹರಿಗೆ ಸರ್ಕಾರದ ಸಹಾಯಧನ ದೊರಕಿಸಿಕೊಡಲು ಪ್ರಾಮಾಣಿಕ ಪ್ರಯತ್ನವನ್ನು ಇಲಾಖಾಧಿಕಾರಿಗಳು ಸಮನ್ವಯದೊಂದಿಗೆ ನಿರ್ವಹಿಸುವಂತೆ ಕಟ್ಟುನಿಟ್ಟಾಗಿ ಸೂಚಿಸಿದರು.



ಕೃಷಿ ಹಾಗೂ ತೋಟಗಾರಿಕೆ ಬೆಳೆಗಳಾದ ಮೆಕ್ಕೆಜೋಳ, ಮೆಣಸಿನಕಾಯಿ, ಈರುಳ್ಳಿ ಬೆಳೆಗಳ ಹಾನಿ ವೀಕ್ಷಣೆ ನಡೆಸಿದ ಅವರು, ಅಧಿಕ ಮಳೆಯಿಂದ ಅಪಾರ ಪ್ರಮಾಣದ ಹಾನಿಯಾಗಿದೆ. ಬೆಳೆ ಹಾನಿ ಜಂಟಿ ಸಮೀಕ್ಷೆ ನಡೆಸುವವರು ಸರಿಯಾಗಿ ಸಮೀಕ್ಷೆ ಕಾರ್ಯ ಕೈಗೊಳ್ಳಬೇಕು ಹಾಗೂ ಸಮೀಕ್ಷೆ ಕಾರ್ಯವು ನಿಖರತೆಯಿಂದ ಕೂಡಿರಲಿ ಎಂದು ನಿರ್ದೇಶನ ನೀಡಿದರು.

> ಹಾನಿ ಪ್ರದೇಶಕ್ಕೆ ಭೇಟಿ ನೀಡಿದ ಸಂದರ್ಭದಲ್ಲಿ ಬೆಳೆ ಹಾನಿಗೊಳಗಾದ ರೈತರು ಜಿಲ್ಲಾಧಿಕಾರಿ ಗೋವಿಂದರೆಡ್ಡಿ ಅವರಲ್ಲಿ ಸರ್ಕಾರದಿಂದ ಬೆಳೆ ಹಾನಿ ನಷ್ಟವನ್ನು ಕೊಡಿಸುವಂತೆ ಮನವಿ ಮಾಡಿದರು. ಇದಕ್ಕೆ ಪ್ರತಿಯಾಗಿ ಜಿಲ್ಲಾಧಿಕಾರಿಗಳು ಮಾತನಾಡಿ, ಹಾನಿ ಸಮೀಕ್ಷೆ ಕಾರ್ಯ ನಡೆಯುತ್ತಲಿದೆ. ಸರ್ಕಾರದ ನಿಯಮಾವಳಿಗಳಲ್ಲಿ ಇರುವ ಅವಕಾಶಗಳನ್ನು ಬಳಸಿಕೊಂಡು ಬೆಳೆ ಹಾನಿಯಾದ ಅರ್ಹ ರೈತರಿಗೆ ಪರಿಹಾರ ಒದಗಿಸಲು ಪ್ರಾಮಾಣಿಕ ಕಾರ್ಯ ಮಾಡಲಾಗುವುದು ಎಂದು ಭರವಸೆ ನೀಡಿದರು.

ಈ ಸಂದರ್ಭದಲ್ಲಿ ಜಂಟಿ ಕೃಷಿ ನಿರ್ದೇಶಕಿ ತಾರಾಮಣಿ, ತೋಟಗಾರಿಕೆ ಇಲಾಖೆಯ ಉಪನಿರ್ದೇಶಕ ಶಶಿಕಾಂತ ಕೋಟೆಮನಿ, ತಹಸೀಲ್ದಾರ ಶ್ರೀನಿವಾಸಮೂರ್ತಿ ಕುಲಕರ್ಣಿ, ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿ ಮಲ್ಲಯ್ಯ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿ–ಸಿಬ್ಬಂದಿಗಳು, ರೈತರು, ಸಾರ್ವಜನಿಕರು ಹಾಜರಿದ್ದರು.

## ಕೆ.ಡಿ.ಪಿ ಸಮಿತಿಗೆ ಅಧಿಕಾರೇತರ ಸದಸ್ಯರ ಆಯ್ಕೆ







■ ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ಅಭಿವೃದ್ಧಿ ಕಾರ್ಯಕ್ರಮಗಳ ಪರಿಣಾಮಕಾರಿ ಅನುಷ್ಠಾನದ ಪರಿಶೀಲನೆಗಾಗಿ ಗದಗ ಜಿಲ್ಲೆಯ ಗದಗ ತಾಲೂಕು ಮಟ್ಟದ ತ್ರೈಮಾಸಿಕ ಪರಿಶೀಲನಾ ಸಮಿತಿಗೆ (ಕೆ.ಡಿ.ಪಿ) ಶಣ್ಮುಕಪ್ಪ ಬಡ್ನಿ, ಎಂ.ಸಿ. ಶೇಖ, ಪ್ರಕಾಶ ಬೊಮ್ಮನಹಳ್ಳಿ, ಮಾರ್ತಂಡ ಹಾದಿಮನಿ, ರೇಖಾ ತಿಮ್ಮರೆಡ್ಡಿ ಅವರುಗಳನ್ನು ಅಧಿಕಾರೇತರ ಸದಸ್ಯರನ್ನಾಗಿ ಕರ್ನಾಟಕ ರಾಜ್ಯಪಾಲರ ಅಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ ಯೋಜನೆ ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆಯ ಅಧೀನ ಕಾರ್ಯದರ್ಶಿ ಮಲ್ಲಿನಾಥ ನಾಮನಿರ್ದೇಶನಗೊಳಿಸಿ ಆದೇಶಿಸಿದ್ದಾರೆ.

### ಪಿಎಸ್‌ಐ ಅಮಾನತ್‌ಗೆ ಆಗ್ರಹಿಸಿ ದಂಡಾಧಿಕಾರಿಗಳ ಕಚೇರಿ ಎದುರು ಪ್ರತಿಭಟನೆ: ರಾಜು ಖಾನಪ್ಪನವರ

# ನ್ಯಾಯ ಸಿಗುವವರೆಗೂ ಹೋರಾಟ

■ ವಿಜಯಸಾಕ್ಷಿ ಸುದ್ದಿ, ಗದಗ

ಶ್ರೀರಾಮ ಸೇನೆಯಿಂದ ಲಕ್ಷ್ಮೇಶ್ವರ ಗೋಸಾವಿ ಸಮುದಾಯಕ್ಕೆ ಬೆಂಬಲ ಸೂಚಿಸಿ ಅಕ್ಟೋಬರ್ 19ರಂದು ಲಕ್ಷ್ಮೇಶ್ವರ ಬಂದ್‌ಗೆ ಕರೆ ನೀಡಿ, ಪ್ರತಿಭಟನೆ ನಡೆಸಿದ್ದೆವು. ಆದರೆ, ಇಲಾಖೆಯ ಉನ್ನತ ಅಧಿಕಾರಿಗಳು ಪಿಎಸ್‌ಐ ಈರಣ್ಣ ರಿತ್ತಿ ವಿರುದ್ಧ ಇದುವರೆಗೂ ಯಾವುದೇ ಕಾನೂನು ಕ್ರಮ ಕೈಗೊಂಡಿಲ್ಲ. ಕೇವಲ ಹಿಂದೂಗಳನ್ನು ತಡೆಯುವ ಕೆಲಸ ನಡೆದಿದ್ದು, ಇದನ್ನು ನಾವು ಸಹಿಸುವುದಿಲ್ಲ ಎಂದು ಶ್ರೀರಾಮ ಸೇನೆಯ ರಾಜ್ಯ ಪ್ರಧಾನ ಕಾರ್ಯದರ್ಶಿ ರಾಜು ಖಾನಪ್ಪನವರ ಹೇಳಿದರು.

ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಪಿಎಸ್‌ಐ ಈರಣ್ಣ ರಿತ್ತಿ ಅವರು ಸೇವೆಯಿಂದ ಅಮಾನತ್ತಾಗುವವರೆಗೂ ಲಕ್ಷ್ಮೇಶ್ವರ ತಾಲೂಕಾ ದಂಡಾಧಿಕಾರಿಗಳು ಹಾಗೂ ತಹಸೀಲ್ದಾರರ ಕಚೇರಿ ಎದುರು ಬೆಳಿಗ್ಗೆ 10ರಿಂದ ಸಾಯಂಕಾಲದವರೆಗೆ ಪ್ರತಿದಿನ ನಿರಂತರವಾಗಿ ಪ್ರತಿಭಟನೆ ನಡೆಸುತ್ತೇವೆ ಎಂದರು.




ಗೋಸಾವಿ ಸಮುದಾಯದ ಹಿರಿಯರಾದ ಬಾಳಪ್ಪ ಗೋಸಾವಿ ಮಾತನಾಡಿ, ಪ್ರತಿ ವರ್ಷವೂ ಗೋಸಾವಿ ಸಮುದಾಯದಿಂದ ಹಿಂದೂ ಹಬ್ಬಗಳ ಆಚರಣೆ ನಡೆಯುತ್ತಾ ಬಂದಿದೆ. ಅದರಂತೆ ಈ ಬಾರಿ ನವರಾತ್ರಿಯ ಪ್ರಯುಕ್ತ ಮೆರವಣಿಗೆ ನಡೆದ ಸಂದರ್ಭದಲ್ಲಿ ನಮ್ಮ ಸಮುದಾಯದ ಯುವಕರು ಭಗವಾ ಶಾಲುಗಳನ್ನು ಹಾಕಿಕೊಂಡು ಹೋಗುವಾಗ ಕೆಲ ಪುಂಡರು ಹಲ್ಲೆ ನಡೆಸಿದರು. ಇದನ್ನು ಪ್ರಶ್ನಿಸಿ ಠಾಣೆಗೆ ದೂರು ನೀಡಲು ಹೋದಾಗ ಠಾಣೆಯ ಪಿಎಸ್‌ಐ ಈರಣ್ಣ ರಿತ್ತಿ ನಮ್ಮ ಮೇಲೆಯೇ ಹಲ್ಲೆ ನಡೆಸಿದ್ದು, ಊರಲ್ಲಿ ಇಲ್ಲದ ಮೃತ ವ್ಯಕ್ತಿಗಳ ಹೆಸರುಗಳನ್ನೂ ಎಫ್‌ಐಆರ್‌ನಲ್ಲಿ ದಾಖಲಿಸಿದ್ದಾರೆ ಎಂದು ಆರೋಪಿಸಿದರು.

> ಶ್ರೀರಾಮ ಸೇನಾ ಸಂಘಟನೆ ಪ್ರಾಮಾಣಿಕವಾಗಿದ್ದು, ಯಾವುದೇ ಆಶೆ–ಆಮಿಷಕ್ಕೆ ಒಳಗಾಗದೆ ಗೋಸಾವಿ ಸಮುದಾಯಕ್ಕೆ ನ್ಯಾಯ ಸಿಗುವ ತನಕ ಹೋರಾಟ ನಡೆಸುತ್ತೇವೆ. ಹೋರಾಟಗಾರರ ಬಗ್ಗೆ ಮತ್ತೊಬ್ಬ ಹೋರಾಟಗಾರರು ಹಗುರವಾಗಿ ಮಾತನಾಡುವುದು ಬಿಡಲಿ ಎಂದು ರಾಜು ಖಾನಪ್ಪನವರ ಹೇಳಿದರು.

ಈ ಸಂದರ್ಭದಲ್ಲಿ ಶ್ರೀರಾಮ ಸೇನಾ ಲಕ್ಷ್ಮೇಶ್ವರ ತಾಲೂಕಾಧ್ಯಕ್ಷ ಈರಣ್ಣ ಪೂಜಾರ, ಗೋಸಾವಿ ಸಮಾಜದ ಯುವಕರಾದ ಹರೀಶ ಗೋಸಾವಿ, ಪ್ರಾಣೇಶ ವ್ಯಾಪಾರಿ, ಹರೀಶ ಕಟ್ಟಿಮನಿ, ನಿಖಿಲ್ ಗೋಸಾವಿ, ಕಿಶನ್ ಗೋಸಾವಿ, ರಾಜು ಗೋಸಾವಿ, ವಾಂತೇಶ ಗೋಸಾವಿ, ಸಂಜು ಗೋಸಾವಿ, ಸಾಗರ ಗೋಸಾವಿ ಸೇರಿದಂತೆ ಇತರರಿದ್ದರು.

## ಸಾಕ್ಷಿ ಸುಭಾಷಿತ

ಇತರರು ನಮ್ಮನ್ನು ಹೇಗೆ ನೋಡುತ್ತಾರೆ ಎಂಬುದು ಮುಖ್ಯವಲ್ಲ, ನಮ್ಮನ್ನು ನಾವು ಹೇಗೆ ನೋಡುತ್ತೇವೆ ಎಂಬುದೇ ಎಲ್ಲಕ್ಕಿಂತ ಮುಖ್ಯವಾದುದು.

–ಸುಭಾಷಿತ

## ಸಂಪಾದಕೀಯ

# ವಕ್ಫ್ ವಿವಾದ ಮತ್ತು ಸರಕಾರ

ರಾಜ್ಯಾದ್ಯಂತ ಒಂದು ಕಡೆ ಉಪಚುನಾವಣೆ ವಿಷಯ ಭಾರೀ ಚರ್ಚೆಯಲ್ಲಿದ್ದರೆ, ಮತ್ತೊಂದೆಡೆ ವಕ್ಫ್ ವಿವಾದ ಜನರ ಗಮನ ಸೆಳೆಯುತ್ತಿದೆ. ವಕ್ಫ್ ಆಸ್ತಿಗಳ ಇ ಖಾತಾ ಮಾಡಿಸುವ ಒಂದು ಸಣ್ಣ ವಿಷಯ ಇವತ್ತು ಭಾರೀ ವಿವಾದಕ್ಕೆ ಕಾರಣವಾಗಿದೆ. ಮತ್ತು ರಾಜ್ಯ ಸರಕಾರಕ್ಕೆ ಸಂಕಷ್ಟ ತಂದೊಡ್ಡುವ ಕೆಲಸ ಮಾಡುತ್ತಿದೆ.

ವಕ್ಫ್ ಆಸ್ತಿ ವಿಷಯ ಏನೇ ಇರಲಿ. ಆದರೆ ಪ್ರತಿಪಕ್ಷಗಳು ಮಾತ್ರ ಅದರ ರಾಜಕೀಯ ಲಾಭ ಪಡೆಯಲು ಮುಂದಾಗಿವೆ. ಬಿಜೆಪಿ ನಾಯಕರು ಇದೇ ಸರಿಯಾದ ಸಮಯ ಎಂದರಿತು, ರಾಜ್ಯ ಸರಕಾರದ ತುಷ್ಟೀಕರಣ ರಾಜಕಾರಣವನ್ನು ವೈಭವೀಕರಿಸುವ ಕೆಲಸಕ್ಕೆ ಮುಂದಾಗಿದೆ. ತಾಂತ್ರಿಕ ಸಮಸ್ಯೆಯಿಂದ ಈ ರೀತಿ ಆಗಿದೆ ಎಂದು ಅಧಿಕಾರಿಗಳು ಸಮಜಾಯಿಷಿ ನೀಡಿದರೂ ಸಮಾಧಾನಗೊಳ್ಳದ ಕಮಲ ಕಲಿಗಳು, ಈಗ ಮುಸ್ಲಿಂ ಸಮುದಾಯದ ಮೇಲೆ ದ್ವೇಷ ಕಾರುವ ಕೆಲಸ ಮಾಡುತ್ತಿದೆ.

ರೈತರ ಜಮೀನಿನ ಉತಾರದಲ್ಲಿ ವಕ್ಫ್ ಎಂದು ನಮೂದಾಗಿರುವ ವಿಷಯದ ಕುರಿತು ನೀಡಿದ ಪ್ರತಿಕ್ರಿಯೆ ಶಾಂತಿ ಸುವ್ಯವಸ್ಥೆ ಹಾಳು ಮಾಡುವ ಪ್ರಯತ್ನವಾಗಿದೆ. ನಮಾಜ್ ಮಾಡಿದ ಜಾಗವೆಲ್ಲ ವಕ್ಫ್ ಎನ್ನಲಾಗುತ್ತಿದೆ, ಸೊಕ್ಕು ಹೆಚ್ಚಾಗಿದೆ ಎಂದೆಲ್ಲಾ ಹುಚ್ಚುಚ್ಚಾಗಿ ಮಾತನಾಡಿ, ತಮ್ಮ ಗೌರವ ಘನತೆಯನ್ನು ಮತ್ತಷ್ಟು ಕಡಿಮೆ ಮಾಡಿಕೊಂಡಿದ್ದಾರೆ.

ರಾಜ್ಯದ ಬೇರೆ ಬೇರೆ ಭಾಗದ ಆಸ್ತಿಗಳಲ್ಲಿ ವಕ್ಫ್ ಎಂದು ಯಾವ ಮಾರಣಕ್ಕಾಗಿ ಆ ರೀತಿ ನಮೂದಾಗಿದೆ ಎನ್ನುವ ಬಗ್ಗೆ ಪರಿಶೀಲನೆ ನಡೆಸುವ ವ್ಯವಧಾನ ಸರಕಾರಕ್ಕೆ ಎಳ್ಳಷ್ಟು ಇಲ್ಲ. ಕಾರಣ, ಇಡೀ ಸರಕಾರ ಉಪಚುನಾವಣೆಯಲ್ಲಿ ಮುಳುಗಿದೆ. ಹೀಗಾಗಿ ಸದ್ಯಕ್ಕೆ ವಕ್ಫ್ ಸರಕಾರಕ್ಕೆ ಬೇಡವಾದ ವಿಷಯ.

ರಾಜ್ಯದಲ್ಲಿ ಯಾವುದೇ ಆಸ್ತಿಗೆ ವಕ್ಫ್ ಎಂದು ನಮೂದಾಗಲಿ ವಕ್ಫ್ ಮಂಡಳಿಯಾಗಲಿ, ಮುಸ್ಲಿಂ ಸಮುದಾಯವಾಗಲಿ ಕಾರಣವಲ್ಲ. ಈ ವಿಷಯ ಬಿಜೆಪಿ ನಾಯಕರಿಗೂ ಗೊತ್ತು. ಕಾಂಗ್ರೆಸ್ ನಾಯಕರಿಗೂ ಗೊತ್ತು. ಆದರೂ ಮುಸ್ಲಿಂ ಸಮುದಾಯದ ವಿರುದ್ಧ ಮಾತನಾಡುವ ಅವರ ಬಾಯಿಚಪಲಕ್ಕೆ ಏನು ಹೇಳಬೇಕು.

ಸರಕಾರ ವಕ್ಫ್ ವಿಷಯ ನಿರ್ವಹಣೆಯಲ್ಲಿ ವಿಫಲವಾಗಿದ್ದೆ ಒಂದು ಸಮುದಾಯ ಇವತ್ತು ಕಟಕಟೆಯಲ್ಲಿ ನಿಲ್ಲುವಂಥ ವಾತಾವರಣ ನಿರ್ಮಾಣವಾಗಿದೆ. ಇನ್ನಾದರೂ ಸರಕಾರ ಎಚ್ಚೆತ್ತುಕೊಳ್ಳಬೇಕು. ಇಲ್ಲವಾದರೆ ಕಾಂಗ್ರೆಸ್ಸಿಗೆ ದಲಿತ, ಅಲ್ಪಸಂಖ್ಯಾತರ ಪರವಾಗಿರುವ ಪಕ್ಷ ಎಂದು ಹೇಳಿಕೊಳ್ಳುವ ನೈತಿಕತೆ ಇರುವುದಿಲ್ಲ.



ಮುಳಗುಂದ ಪಟ್ಟಣದ ಸಮೀಪದ ಕುರ್ತಕೋಟಿ ಗ್ರಾಮದ ಹುಲಕೋಟಿ ಸಹಕಾರಿ ಶಿಕ್ಷಣ ಸಂಸ್ಥೆಯ ಮನೋಹರ ಇನಾಮತಿ ಪ್ರೌಢಶಾಲೆಯ ವಿದ್ಯಾರ್ಥಿ ಇಮ್ತಾಜ ಅಣ್ಣಿಗೇರಿ ಜಿಲ್ಲಾ ಮಟ್ಟದಲ್ಲಿ ಪ್ರಥಮ ಸ್ಥಾನ ಪಡೆದು ರಾಜ್ಯ ಮಟ್ಟಕ್ಕೆ ಆಯ್ಕೆಯಾಗಿದ್ದು, ಶಾಲಾ ಪ್ರಧಾನ ಗುರು ಡಿ.ಎಚ್. ಜಂಭುನಾಥ ಹಾಗೂ ದೈಹಿಕ ಶಿಕ್ಷಕ ಮಂಜುನಾಥ ಅಂಗಡಿ ಅಭಿನಂದಿಸಿದರು.

ಕವನ

## ದೀಪಾವಳಿ



ಬಂತೋ.. ಬಂತೋ.. ದೀಪಾವಳಿ ಬಂತೋ..
ತಂತೋ.. ತಂತೋ.. ಸಡಗರ ತಂತೋ..
ಸಿರಿ ತಂದಿತಪ್ಪ ಈ ಬೆಳಕಿನ ಹಬ್ಬ
ಸಂತಸದ ರೂಪ ಈ ದೀಪಾವಳಿ ಹಬ್ಬ
ಮನೆಯ ಅಂಗಳದಿ ಬಣ್ಣದ ರಂಗೋಲಿ
ಮನೆಯ ಬಾಗಿಲು ಮಾವಿನ ತೋರಣ
ಸಾಲು ಸಾಲು ಹಣತೆಯ ದೀಪ
ಅಂಗಳ ತುಂಬಿ ಬೆಳಗಿತೇ ದೀಪ
ಊರ ತುಂಬೆಲ್ಲಾ ಋಂಸತು ನೋಡಾ
ನಾಡಿನ ಜನದ ಹಿಗ್ಗು ನೋಡಾ
ಹಬ್ಬದ ಸಿರಿಗೆ ತುಪ್ಪದ ಘಮ ಘಮ
ಹಸಿರಿನ ಗರಿಗೆ ಸಂಭ್ರಮದ ಸಮ ಸಮ
ಹರಿಯುವ ನೀರಲ್ಲಿ ತಲೆ ಎಣ್ಣೆ ಸ್ನಾನ
ನಾರಿಯರ ಮುಡಿ ತುಂಬ ಮಲ್ಲಿಗೆ
ತರ ತರಹದ ಪಟಾಕಿ
ಬೆಳಕು ಬೀರಿ ಸಿಡಿಯುತ್ತೆ
ದೀಪಗಳ ಸಾಲು ಈ ದೀಪಾವಳಿ ಹಬ್ಬ
ಸಂತಸದ ರೂಪ ಈ ದೀಪಾವಳಿ ಹಬ್ಬ.



– ವಿ.ಎಂ.ಎಸ್. ಗೋಪಿ.
ಸಾಹಿತಿಗಳು, ಬೆಂಗಳೂರು.

### ಶಿಕ್ಷಣ ಕ್ಷೇತ್ರದಲ್ಲಿ ದೊಡ್ಡ ಮಟ್ಟದ ಬದಲಾವಣೆ ತಂದ ಕನ್ನಡದ ಕಟ್ಟಾಳು

# ಸ್ಮರಣೀಯ 'ಡೆಪ್ಯೂಟಿ' ಚನ್ನಬಸಪ್ಪನವರು




ಡೆಪ್ಯೂಟಿ ಚನ್ನಬಸಪ್ಪನವರ ಪೂರ್ಣ ಹೆಸರು ಚನ್ನಬಸಪ್ಪ ಬಸಲಿಂಗಪ್ಪ ಧಾರವಾಡ. ಕನ್ನಡದಲ್ಲಿ ಶಿಕ್ಷಣ ಸಾಹಿತ್ಯ ಪ್ರಸಾರದ ಉದ್ದೇಶದಿಂದ ಏಪ್ರೀಲ್ 1865ರಲ್ಲಿ ಅವರು ಪ್ರಾರಂಭಿಸಿದ 'ಮಠಪತ್ರಿಕೆ'ಯ ಮೊದಲನೇ ಸಂಚಿಕೆಯಲ್ಲಿಯೇ ಅವರು 'ಕರ್ನಾಟಕ ಸೀಮೆ' ಎಂಬ ಪದವನ್ನು ಉಲ್ಲೇಖಿಸಿದ್ದಾರೆ. ಅಂದರೆ ಸುಮಾರು 159 ವರ್ಷಗಳ ಹಿಂದೆಯೇ ಸಮಗ್ರ ಕರ್ನಾಟಕದ ಕಲ್ಪನೆಯನ್ನಿಟ್ಟುಕೊಂಡು 'ಕರ್ನಾಟಕ' ಎಂಬ ಪದ ಬಳಸಿರುವುದು ನಿಜಕ್ಕೂ ಕನ್ನಡಿಗರಾದ ನಮಗೆ ಅತ್ಯಂತ ಅಭಿಮಾನದ ಸಂಗತಿ.

ಡೆಪ್ಯೂಟಿ ಅವರಿಗೆ ನಾಡು–ನುಡಿಯ ಬಗ್ಗೆ ಇದ್ದ ಕಾಳಜಿ, ಪ್ರೀತಿ, ಅಭಿಮಾನ ಅಪಾರ. ಶಿಕ್ಷಣ ಇಲಾಖೆಯಲ್ಲಿ ವ್ಯಾಪಕ ಅಧಿಕಾರ ಹೊಂದಿದ್ದ 'ಡೆಪ್ಯೂಟಿ ಎಜ್ಯುಕೇಷನಲ್ ಇನ್‌ಸ್ಪೆಕ್ಟರ್' ಹುದ್ದೆಯಲ್ಲಿದ್ದುಕೊಂಡು ಡೆಪ್ಯೂಟಿ ಚನ್ನಬಸಪ್ಪನವರು ಕನ್ನಡ ಭಾಷೆಯ ಬೆಳವಣಿಗೆಗಾಗಿ, ಜೊತೆಗೆ ಎಲ್ಲ ವಿಷಯಗಳನ್ನು ಕನ್ನಡದಲ್ಲಿ ಬೋಧಿಸಲು ಕನ್ನಡ ಪಂಡಿತರಿಂದ ಪಠ್ಯ ಪೂರಕ ಸಾಮಗ್ರಿ ರಚಿಸಿ ಪ್ರಾಥಮಿಕ ಶಾಲೆಗಳಿಗೆ ಪೂರೈಸಿ ಕನ್ನಡ ಕಲಿಕೆಗೆ ಭದ್ರ ಬುನಾದಿ ಹಾಕುವುದರ ಜೊತೆಗೆ ಆಡಳಿತದಲ್ಲಿ ಕನ್ನಡ ಭಾಷಾ ಅನುಷ್ಠಾನ ಸಹಿತ ಹಲವಾರು ಸುಧಾರಣೆಗಳನ್ನು ತರಲು ಪ್ರಾಮಾಣಿಕವಾಗಿ ಪ್ರಯತ್ನಿಸಿದ್ದನ್ನು ಸಮಸ್ತ ಕನ್ನಡಿಗರು ಎಂದೂ ಮರೆಯುವಂತಿಲ್ಲ.

ಶಿಕ್ಷಣ ಕ್ಷೇತ್ರದಲ್ಲಿ ದೊಡ್ಡ ಮಟ್ಟದ ಬದಲಾವಣೆ ತರುವ ಉದ್ದೇಶದಿಂದ ಆಗಿನ ಮುಂಬೈ ಸರಕಾರ ಮೇ–1, 1855ರಂದು ಸಾರ್ವಜನಿಕ ಶಿಕ್ಷಣ ಇಲಾಖೆಯ ನಿರ್ದೇಶನಾಲಯ ತೆರೆಯಿತು. ಇದರಿಂದಾಗಿ ಪ್ರಾಥಮಿಕ ಶಿಕ್ಷಣಕ್ಕೆ ಹೆಚ್ಚಿನ ಪ್ರೋತ್ಸಾಹ ದೊರೆಯಿತು. ಮುಂಬೈ ಸರಕಾರ ಕ್ಯಾಪ್ಟನ್ ಲಿಸ್ಟರ್ ಸಲಹೆಯನ್ನು ಗಂಭೀರವಾಗಿ ಪರಿಗಣಿಸಿ ಮರಾಠಿ, ಗುಜರಾತಿ, ಕನ್ನಡ ಈ ಮೂರು ಪ್ರಾದೇಶಿಕ ಭಾಷೆಗಳಲ್ಲಿ ಕ್ರಮವಾಗಿ ಪುಣೆ, ಅಹಮದಾಬಾದ್, ಧಾರವಾಡದಲ್ಲಿ ಆಯಾ ಪ್ರಾದೇಶಿಕ ಭಾಷೆಗಳಲ್ಲಿ ಪ್ರಾಥಮಿಕ ಶಿಕ್ಷಕರ ತರಬೇತಿ ಶಾಲೆ (ನಾರ್ಮಲ್ ಸ್ಕೂಲ್)ಗಳನ್ನು ತೆರೆಯಲು ಅನುಮತಿಸಲಾಯಿತು.

ಹೀಗೆ ಧಾರವಾಡದಲ್ಲಿ 1856ರಲ್ಲಿ ನಾರ್ಮಲ್ ಸ್ಕೂಲ್ ಪ್ರಾರಂಭಗೊಂಡಿತು. ಈ ಶಿಕ್ಷಕರ ತರಬೇತಿ ಶಾಲೆಯ ಪ್ರಾಚಾರ್ಯರಾಗಿ ಚನ್ನಬಸಪ್ಪನವರು ನಿಯುಕ್ತಿಗೊಂಡರು. ಚನ್ನಬಸಪ್ಪನವರ ಕಾರ್ಯದಕ್ಷತೆ ಹಾಗೂ ಪರಿಶ್ರಮದಿಂದ ಶಿಕ್ಷಕರ ತರಬೇತಿ ಶಾಲೆ 1864ರಲ್ಲಿ ಸರ್ ವಿಲಿಯಂ ಅಲೆನ್ ರೆಸಲ್ ಅವರು ನಾರ್ಮಲ್ ಕ್ಲಾಸ್‌ನ್ನು ಮೇಲ್ದರ್ಜೆಗೆ ಏರಿಸಿ ಗಂಡು ಮಕ್ಕಳ ಟ್ರೇನಿಂಗ್ ಕಾಲೇಜು ಎಂದು ಮರುನಾಮಕರಣ ಮಾಡಿದರು. ಚನ್ನಬಸಪ್ಪನವರೇ ಆ ಕಾಲೇಜಿನ ಪ್ರಥಮ ಪ್ರಿನ್ಸಿಪಾಲರಾಗಿ ನೇಮಕಗೊಂಡರು. ಈ ಘಟನೆ ಚನ್ನಬಸಪ್ಪನವರ ಅಪಾರ ಪಾಂಡಿತ್ಯದ ಬಗ್ಗೆ ಬ್ರಿಟಿಷರಿಗಿದ್ದ ಗೌರವವನ್ನು ಹಾಗೂ ಅವರ ದಕ್ಷತೆ, ಪ್ರಾಮಾಣಿಕತೆ ಎಂತಹುದು ಎಂಬುದನ್ನು ತೋರಿಸುತ್ತದೆ.

ಧಾರವಾಡದ ಗಂಡು ಮಕ್ಕಳ ಸರಕಾರಿ ಟ್ರೇನಿಂಗ್ ಕಾಲೇಜಿನ ಪ್ರಥಮ ಪ್ರಿನ್ಸಿಪಾಲರಾಗಿ, ಕನ್ನಡದಲ್ಲಿ ಬೋಧನಾ ಸಾಹಿತ್ಯವನ್ನು, ಜೊತೆ–ಗೆ ಕನ್ನಡದಲ್ಲಿ ಎಲ್ಲ ವಿಷಯಗಳ ಬೋಧನಾ ಸಾಹಿತ್ಯವನ್ನು ಶಿಕ್ಷಕರಿಗೆ ತಿಳಿಸಿಕೊಡುವುದಕ್ಕಾಗಿಯೇ ಮಠಪತ್ರಿಕೆಯನ್ನು ಆರಂಭಿಸಿದರು. ಈ ಪತ್ರಿಕೆಯು ಕನ್ನಡ ಪತ್ರಿಕೋದ್ಯಮದ ಹಿರಿಯ ನಿಯತಕಾಲಿಕೆ ಎಂಬ ಗೌರವಕ್ಕೂ ಪಾತ್ರವಾಗಿದೆ. ಹೀಗೆ ಇವರು ತಮ್ಮ ಹುದ್ದೆಯನ್ನು ಬಳಸಿಕೊಂಡು ಹಲವಾರು ಬ್ರಿಟಿಷ್ ಅಧಿಕಾರಿಗಳಿಗೆ ವಾಸ್ತವಿಕತೆ ಮನದಟ್ಟು ಮಾಡಿಕೊಟ್ಟು ಅವರನ್ನು ವಿಶ್ವಾಸಕ್ಕೆ ತೆಗೆದುಕೊಂಡು ಕನ್ನಡ ಭಾಷೆಯ ಬೆಳವಣಿಗೆಗಾಗಿ ನಿಸ್ವಾರ್ಥ ಸೇವೆಯನ್ನು ಸಲ್ಲಿಸಿದರು.



ಕನ್ನಡ ಭಾಷೆಯ ಬೆಳವಣಿಗೆಗಾಗಿ ಹಾಗೂ ಶಿಕ್ಷಣ ಇಲಾಖೆಗೆ ಸಂಬಂಧಿಸಿದ ಸುದ್ದಿ, ಸಮಾಚಾರಗಳನ್ನು ಶಿಕ್ಷಕರು ಹಾಗೂ ವಿದ್ಯಾರ್ಥಿಗಳಿಗೆ ತಿಳಿಸಿಕೊಡಬೇಕೆಂಬ ಮಹದಾಸೆಯಿಂದ ಅಂದಿನ ದಿನಮಾನದಲ್ಲಿ ಇನ್ನೂ ಯವುದೇ ಮುದ್ರಣ ಯಂತ್ರಗಳಾಗಲಿ, ಇಂಟರ್‌ನೆಟ್, ಕಂಪ್ಯೂಟರ್‌ನಂತಹ ವ್ಯವಸ್ಥೆಯಾಗಲಿ ಇದ್ಯಾವುದು ಇಲ್ಲದ ಸಂದರ್ಭದಲ್ಲಿಯೇ ಕೇವಲ ಕಲ್ಲಚ್ಚಿನ ಪದ್ಧತಿಯಂತೆ ಕೈಯಿಂದಲೇ ಬರೆದು 'ಮಠ ಪತ್ರಿಕೆ'ಯನ್ನು ಆರಂಭಿಸಿದರು. ಕನ್ನಡ ಶಾಲೆಗಳು ಅಂದಿನ ದಿನಮಾನಗಳಲ್ಲಿ ಮಠಗಳಲ್ಲೇ ನಡೆಯುತ್ತಿದ್ದುದರಿಂದ ಅವುಗಳ ಮಾರ್ಗದರ್ಶನಕ್ಕಾಗಿಯೇ ಹುಟ್ಟು ಹಾಕಿದ ಮಾಸ ಪತ್ರಿಕೆ ಇದಾಗಿದ್ದರಿಂದ ಅದಕ್ಕೆ ಮಠಪತ್ರಿಕೆ ಎಂದು ಕರೆಯಲಾಯಿತು.

ಚನ್ನಬಸಪ್ಪನವರು ಬೆಳಗಾವಿ ಜಿಲ್ಲೆಯ ಡೆಪ್ಯೂಟಿ ಎಜ್ಯುಕೇಷನಲ್ ಇನ್‌ಸ್ಪೆಕ್ಟರ್ ಹುದ್ದಗೆ ನಿಯುಕ್ತಿಗೊಳ್ಳುತ್ತಿದ್ದಂತೆ ಕನ್ನಡ ಶಾಲೆಗಳ ಅಭಿವೃದ್ಧಿಗೆ ಗಮನ ಹರಿಸಿದರು. ಬ್ರಿಟಿಷ್ ಅಧಿಕಾರಿ ರಸೆಲ್ ಗಮನಕ್ಕೆ ತಂದು ಕನ್ನಡ ಪಠ್ಯ ಪುಸ್ತಕ ರಚನೆಗೆ ಕನ್ನಡ ಪಂಡಿತರು ಹಾಗೂ ಪರಿಣಿತರ ಸೇವೆ ಬಳಸಿಕೊಳ್ಳುವುದರ ಅಗತ್ಯತೆಯ ಕುರಿತು ವಿವರಿಸಿದರು. ಇವರ ಬೇಡಿಕೆಯನ್ನು ರಸೆಲ್ ಒಪ್ಪಿದರು. ಇದರಿಂದಾಗಿ ಹಲವಾರು ಕನ್ನಡ ಜ್ಞಾನ ಸಂಪತ್ತಿನ ಕೃತಿಗಳು ಹೊರಬರಲು ಸಾಧ್ಯವಾಯಿತು. ಇದರ ಜೊತೆಗೆ ಎರಡು ಗಣಿತ ಪುಸ್ತಕಗಳನ್ನು ಪ್ರಾಥಮಿಕ ಶಾಲಾ ವಿದ್ಯಾರ್ಥಿಗಳಿಗಾಗಿ ರಚಿಸಿ ಕನ್ನಡ ಕಲಿಕೆಗೆ ಭದ್ರ ಬುನಾದಿ ಹಾಕಿದರು.

ಕನ್ನಡ ಭಾಷೆಯಲ್ಲಿಯೇ ಪತ್ರ ವ್ಯವಹಾರ, ಕಲಿಕೆ, ದಫ್ತರಗಳನ್ನಿಡುವಂತೆ ಶಾಲಾ ಶಿಕ್ಷಕರಿಗೆ ಆದೇಶಿಸಿದರು. ಆಗಿನ ಸಂದರ್ಭದಲ್ಲಿ ಬೆಳಗಾವಿಯಲ್ಲಿ ಶಿಕ್ಷಕರ ತರಬೇತಿಗಾಗಿ ಕನ್ನಡ ಅಭ್ಯರ್ಥಿಗಳು ದೊರೆಯವುದು ತುಂಬಾ ಕಷ್ಟವಾಗಿತ್ತು. ಇದರಿಂದಾಗಿ ಶಿಕ್ಷಕರ ತರಬೇತಿ ಕಾಲೇಜನ್ನು ಬೆಳಗಾವಿಯಿಂದ ಧಾರವಾಡಕ್ಕೆ ಸ್ಥಳಾಂತರಿಸುವಂತೆ ನಿರಂತರವಾಗಿ ಪ್ರಯತ್ನವನ್ನು ಮುಂದುವರೆಸಿದರು. ಇದರ ಫಲವಾಗಿ ಮುಂದೆ 1875ರಲ್ಲಿ ಡೆಪ್ಯೂಟಿ ಚನ್ನಬಸಪ್ಪನವರ ಇಚ್ಛೆಯಂತೆ ಬೆಳಗಾವಿಯ ಶಿಕ್ಷಕರ ತರಬೇತಿ ಕಾಲೇಜನ್ನು ಧಾರವಾಡಕ್ಕೆ ಸ್ಥಳಾಂತರಿಸಲಾಯಿತು.

ಹೀಗೆ ಕನ್ನಡ ಕಟ್ಟುವ ಕೆಲಸ ಮಾಡುತ್ತಿರುವಾಗಲೇ ಚನ್ನಬಸಪ್ಪನವರು ಜನೇವರಿ–4, 1881ರಲ್ಲಿ ನಿಧನರಾದರು. ಒಟ್ಟಾರೆಯಾಗಿ ಚನ್ನಬಸಪ್ಪನವರು ಸರಳ ಜೀವನ, ಉನ್ನತ ಚಿಂತನೆ ಗಳೊಂದಿಗೆ ಬದುಕಿದವರು. ಕನ್ನಡ ನಾಡು–ನುಡಿಗಾಗಿ ತಮ್ಮ ಜೀವನವನ್ನೇ ಮುಡುಪಾಗಿಟ್ಟಂತವರು, ಇವರ ನಿಸ್ವಾರ್ಥ ಸೇವೆ ಸ್ಮರಣೀಯವಾಗಿದೆ.




– ರಾಜು ಭೂಶೆಟ್ಟಿ. ಹುಬ್ಬಳ್ಳಿ.

### ಅಕ್ಟೋಬರ್ 31ರಂದು 'ರಾಷ್ಟ್ರೀಯ ಏಕತಾ ದಿನಾಚರಣೆ' ನಿಮಿತ್ತ ಸಾಂದರ್ಭಿಕ ಲೇಖನ

# ಭಾರತ ಒಂದಾಗಲಿ, ಐಕ್ಯತೆಯೇ ಮಂತ್ರವಾಗಲಿ

ಏಕತೆ ಇರುವಲ್ಲಿ ಯಾವಾಗಲೂ ಗೆಲುವು ಇರುತ್ತದೆ. ಎಲ್ಲಿ ಒಗ್ಗಟ್ಟು ಇರುತ್ತದೋ ಅಲ್ಲಿ ಗೆಲುವು ಇದ್ದೇ ಇರುತ್ತದೆ. ಏಕತೆಯೇ ಶಕ್ತಿ. ಸಾಮೂಹಿಕ ಕೆಲಸ ಮತ್ತು ಸಹಕಾರ ಇದ್ದಾಗ ಅದ್ಭುತವಾದುದನ್ನು ನಾವು ಸಾಧಿಸಬಹುದು. ಹಾಗೆಯೇ ಇಂದಿನ ಯುವಕರು ಒಂದಾಗಬೇಕು ಮತ್ತು ದೇಶಕ್ಕೆ ಏಕತೆಯ ಒಗ್ಗಟ್ಟನ್ನು ಕಲಿಸಬೇಕು. ಅವರಿಗೆ ಈಗಿನ ಕುಟುಂಬಗಳಲ್ಲಿ ಐಕ್ಯತೆ ಕುರಿತು ಜಾಗೃತಿ ಮೂಡಿಸುವ ಕಾರ್ಯವಾಗಬೇಕಾಗಿದೆ. ಜನರಲ್ಲಿ ಏಕತೆಯ ಅರಿವಿಗಾಗಿ ಹಾಗೂ ರಾಷ್ಟ್ರೀಯ ಭಾವೈಕ್ಯತೆಯ ಶಿಲ್ಪಿ, ಭಾರತದ ಉಕ್ಕಿನ ಮನುಷ್ಯ ಎಂದು ಕರೆಯಲ್ಪಡುವ ಸರ್ದಾರ್ ವಲ್ಲಭಭಾಯಿ ಪಟೇಲ್ ಅವರ ಜನ್ಮದಿನದ ಸವಿನೆನಪಿಗಾಗಿ ಭಾರತದಲ್ಲಿ ಪ್ರತಿ ವರ್ಷ ಅಕ್ಟೋಬರ್ 31ರಂದು ರಾಷ್ಟ್ರೀಯ ಏಕತಾ ದಿನವನ್ನಾಗಿ ಆಚರಿಸಲಾಗುತ್ತಿದೆ. ಈ ದಿನವನ್ನು ಭಾರತ ಸರ್ಕಾರ 2014ರಲ್ಲಿ ಪ್ರಾರಂಭಿಸಿತು.

ವಲ್ಲಭಭಾಯಿ ಜಾವೆರ್ಭಾಯ್ ಪಟೇಲ್ ಅವರು ಅಕ್ಟೋಬರ್ 31, 1875ರಂದು ಖೇಡಾ ಜಿಲ್ಲೆಯ ನಾಡಿಯಾಡನಲ್ಲಿ ಜನಿಸಿದರು. ಇವರು



ಭಾರತದ ಮೊದಲ ಗೃಹಮಂತ್ರಿ ಮತ್ತು ಉಪ ಪ್ರಧಾನ ಮಂತ್ರಿಯಾಗಿ, ಶಾಂತಿಯನ್ನು ಪುನಃಸ್ಥಾಪಿಸಲು ಕೆಲಸ ಮಾಡಿದರು.

ಅವರು ಕಾನೂನು ಪದವಿ ಪಡೆದಿದ್ದರೂ ಗಾಂಧೀಜಿ ಅವರ ಕರೆಗೆ ಓಗೊಟ್ಟು ಕ್ವಿಟ್ ಇಂಡಿಯಾ ಚಳವಳಿಯಲ್ಲಿ ಧುಮುಕಿ ಸ್ವತಂತ್ರ ಭಾರತಕ್ಕಾಗಿ ಬ್ರಿಟಿಷರ ವಿರುದ್ಧ ಹೋರಾಟ ನಡೆಸಿದರು. ಸ್ವಾತಂತ್ರ್ಯ ಸಿಕ್ಕ ನಂತರ ರಾಜ್ಯಗಳ ಪುನರ್ ವಿಂಗಡನೆಯಲ್ಲಿ ಮಹತ್ವದ ಪಾತ್ರ ವಹಿಸಿದ್ದ ಇವರು ಅಖಂಡ ಭಾರತವನ್ನು ರೂಪಿಸುವಲ್ಲಿ, 560 ಸಂಸ್ಥಾನಗಳಿಂದ ಭಾರತವನ್ನು ಏಕೀಕರಣಗೊಳಿಸುವಲ್ಲಿ ನಿರ್ಣಾಯಕ ಪಾತ್ರವಹಿಸಿದರು. ಇದಲ್ಲದೆ ಗುಜರಾತಿನ ಖೇದ, ಬೊರ್ಸದ್, ಬಾರ್ಡೋಲಿಗಳಲ್ಲಿ ರೈತರ ಪರ ಹೋರಾಟದಲ್ಲೂ ಪಾಲ್ಗೊಂಡಿದ್ದರು. ಅಷ್ಟೇ ಅಲ್ಲದೇ 'ಉಕ್ಕಿನ ಮನುಷ್ಯ' ಎಂದೇ ಪ್ರಸಿದ್ಧರಾದ ಧೀಮಂತ ವ್ಯಕ್ತಿ.

ಹೀಗೆ ಸರ್ದಾರ್ ಪಟೇಲರು ಏಕತೆಗೆ ಯಾವ ರೀತಿ ಕೊಡುಗೆ ನೀಡಿದ್ದರು ಎಂಬ ಬಗ್ಗೆ ಇಂದಿನ ಜನಾಂಗದವರಲ್ಲಿ ಅರಿವು ಮೂಡಿಸುವ ಉದ್ದೇಶದಿಂದ ಕೇಂದ್ರ ಸರ್ಕಾರ ಈ ದಿನವನ್ನು ಆಚರಿಸುತ್ತಿದೆ. 2018ರಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರು ಗುಜರಾತನ ಕೆವಾಡಿಯಾದಲ್ಲಿ ನರ್ಮದಾ ನದಿ ತೀರದಲ್ಲಿ ಸರ್ದಾರ ಅಣೆಕಟ್ಟಿನ ಎದುರಿಗೆ ಸರ್ದಾರ್ ವಲ್ಲಭಬಾಯಿ ಪಟೇಲರ ವಿಶ್ವದಲ್ಲೇ ಅತಿ ಎತ್ತರದ ಪ್ರತಿಮೆಯನ್ನು ಉದ್ಘಾಟಿಸಿದ್ದರು.

ಪ್ರಸಕ್ತ ಸಾಲಿನಲ್ಲಿ ಅತ್ಯಂತ ಉತ್ಸಾಹದಿಂದ ಸೂಕ್ತ ರೀತಿಯಲ್ಲಿ ಎಲ್ಲಾ ಶಾಲೆಗಳಲ್ಲಿ ರಾಷ್ಟ್ರೀಯ ಏಕತಾ ದಿನವನ್ನು ಆಚರಿಸಬೇಕೆಂದು ಸರ್ಕಾರ ವಿಶೇಷ ಸುತ್ತೋಲೆ ಹೊರಡಿಸಿದೆ. ಅದರಂತೆ ಶಾಲಾ ಹಂತದಲ್ಲಿ ಅ. 31ರಂದು ಮಕ್ಕಳಿಗೆ ದೇಶದ ಏಕತೆ ಮತ್ತು ಸಮಗ್ರತೆಯಲ್ಲಿ ಸರ್ದಾರ್ ವಲ್ಲಭಭಾಯಿ ಪಟೇಲ್‌ರವರ ಕೊಡುಗೆ ಕುರಿತು ಚರ್ಚಾ ಸ್ಪರ್ಧೆ, ನಾಟಕ ರಸಪ್ರಶ್ನೆ ಸ್ಪರ್ಧೆಗಳನ್ನು ಹಾಗೂ ಪ್ರಬಂಧ ಸ್ಪರ್ಧೆಗಳನ್ನು ಏರ್ಪಡಿಸುವುದು.

ಒಟ್ಟಾರೆಯಾಗಿ ಅಂದು ದೇಶದಲ್ಲಿ ಏಕತೆಯ ಗಟ್ಟಿ ಧ್ವನಿಯಾಗಿ ಸ್ವಾತಂತ್ರ್ಯ ಹೋರಾಟದ, ಐರನ್ ಮ್ಯಾನ್ ವಲ್ಲಭಭಾಯಿ ಪಟೇಲ್ ಎತ್ತಿದರು. ಅವರು ಆ ಶತಮಾನದ ಇಂದಿನ ಯುವಕರಂತೆ ಹೊಸ ಚಿಂತನೆಯ ವ್ಯಕ್ತಿಯಾಗಿದ್ದರು.ಅವರು ಯಾವಾಗಲೂ ದೇಶಕ್ಕೆ ಏಕತೆಯ ಸಂದೇಶವನ್ನು ನೀಡಿದರು. ಅದರಂತೆ ಇಂದಿನ ಮಕ್ಕಳಿಗೆ ಹಾಗೂ ಯುವಕರಿಗೆ ರಾಷ್ಟ್ರೀಯ ಏಕತೆಯ ಸಂದೇಶವನ್ನು ಅವರಿಗೆ ತಲುಪಿಸಿದಾಗ ಮಾತ್ರ, ಅವರು ದೇಶದಲ್ಲಿ ರಾಷ್ಟ್ರೀಯ ಏಕತೆಯ ಮಹತ್ವವನ್ನು ಅರ್ಥಮಾಡಿಕೊಳ್ಳಲು ಸಾಧ್ಯ.



– ಬಸವರಾಜ ಎಮ್.ಯರಗುಪ್ಪಿ.
ಬಿಆರ್‌ಪಿ, ಶಿರಹಟ್ಟಿ–ಲಕ್ಷ್ಮೇಶ್ವರ.

# ರೈತರಿಂದ 'ಧಾರವಾಡ ಚಲೋ'

■ ವಿಜಯಸಾಕ್ಷಿ ಸುದ್ದಿ, ಗದಗ

ಮುಂಡರಗಿ ತಾಲೂಕು ಸಾರ್ವಜನಿಕ ಹೋರಾಟ ವೇದಿಕೆಯ ಆಶ್ರಯದಲ್ಲಿ ರೈತರ ಪ್ರತಿಭಟನೆಗೆ ತಾಮ್ರಗುಂಡಿ ಕೆರೆಯ ಬಳಿ ಚಾಲನೆ ನೀಡಲಾಯಿತು.

ವೇದಿಕೆಯ ಸಂಚಾಲಕ ಬಸವರಾಜ ಯಲ್ಲಪ್ಪ ನವಲಗುಂದ ಮಾತನಾಡಿ, ಗದಗ ಜಿಲ್ಲೆಯ ಮುಂಡರಗಿ ತಾಲೂಕಿನ ಡಂಬಳ ಹೋಬಳಿ ವ್ಯಾಪ್ತಿಯಲ್ಲಿ ಬರುವ ಮುರಡಿ, ತಾಮ್ರಗುಂಡಿ ಗ್ರಾಮದ ಕೆರೆಯ ಸಲುವಾಗಿ ಮುರಡಿ ಕೆರೆಗೆ 312 ಎಕರೆ ಭೂಸ್ವಾಧೀನಪಡಿಸಿಕೊಂಡಿದ್ದು, ತಾಮ್ರಗುಂಡಿ ರೈತರ ಆರುವರೆ ಎಕರೆ ಭೂಮಿ ಸ್ವಾಧೀನಪಡಿಸಿಕೊಳ್ಳಲಾಗಿದೆ. ಅದಕ್ಕೆ ಪರಿಹಾರ ಕೊಡದೇ ಇರುವ ಇಲಾಖೆಯ ಕಚೇರಿಗೆ ಮುತ್ತಿಗೆ ಹಾಕುವ ಈ ರೈತರ ಹೋರಾಟ ಯಶಸ್ವಿಗೊಳಿಸಬೇಕೆಂದರು.

ಈ ಸಂದರ್ಭದಲ್ಲಿ ಚನ್ನವೀರಪ್ಪ ಅಂಗಡಿ, ಮಲ್ಲಪ್ಪ ಅಂಗಡಿ, ಸಿದ್ದಲಿಂಗೇಶ ಚನ್ನವೀರಪ್ಪ ಅಂಗಡಿ, ಬಸಪ್ಪ ವಡ್ಡರ, ಬಸವರಾಜ ಬನ್ನಿಕೊಪ್ಪ ಮುಂತಾದವರು ಉಪಸ್ಥಿತರಿದ್ದರು.






ಗದಗ ಸಮೀಪದ ದಕ್ಷಿಣ ಕಾಶಿ ಜಲಾಶಂಕರದಲ್ಲಿ SPYSS ಕರ್ನಾಟಕ ಗದಗ–ಬೆಟಗೇರಿ ಶಾಖೆಯ ಶ್ರೀನಿವಾಸ ಭವನ ಶಿಕ್ಷಕರು, ಶಿಕ್ಷಣಾರ್ಥಿಗಳು, ಯೋಗ ಬಂಧುಗಳು ಜಲಾಶಂಕರನಿಗೆ ಪೂಜೆ ಸಲ್ಲಿಸಿ ನಂತರ ಜಲಾಶಂಕರದ ಪ್ರಕೃತಿಯಲ್ಲಿ ಚಾರಣ ನಡೆಸಿ, ಯೋಗಾಸನ ಕಾರ್ಯಕ್ರಮ ನಡೆಸಿದರು.



ಗದಗ: ರಾಚೂಟೇಶ್ವರ್ ಯುವಕ ಮಂಡಳಿ ವತಿಯಿಂದ ಡಾ. ಪುನೀತ್ ರಾಜಕುಮಾರ ಅವರ 3ನೇ ವರ್ಷದ ಪುಣ್ಯಸ್ಮರಣೆ ಆಚರಿಸಲಾಯಿತು. ಈ ಸಂದರ್ಭದಲ್ಲಿ ಯುವ ಮುಖಂಡ ನವೀನ ನಾಲ್ವಾಡ ಮಾತನಾಡಿ, ಪುನೀತ್ ಅವರ ಆದರ್ಶ ಜೀವನ ಯುವ ಪೀಳಿಗೆಗೆ ಮಾರ್ಗದರ್ಶನ ಆಗಿದೆ ಎಂದರು. ನಂತರ ಅನ್ನಸಂತರ್ಪಣೆ ನೆರವೇರಿತು. ಬಸವರಾಜ್ ಮಡಿವಾಳರ, ವಿಶ್ವನಾಥ್ ಸಫಾರಿ, ಮಂಜುನಾಥ್ ಅಂತರಗೊಂಡ್, ಶಿವು, ಮಲ್ಲಿಕಾರ್ಜುನ್ ಮುಂತಾದವರು ಇದ್ದರು.

### ಕೇಂದ್ರ ಸರ್ಕಾರದ ಯೋಜನೆಗಳ ಪ್ರಗತಿ ಪರಿಶೀಲಿಸಿದ ನ್ಯಾಷನಲ್ ಲೆವಲ್ ಮಾನಿಟರಿಂಗ್ ತಂಡ

# ಫಲಾನುಭವಿಗಳಿಂದ ಅಭಿಪ್ರಾಯ ಸಂಗ್ರಹ

**■ವಿಜಯಸಾಕ್ಷಿ ಸುದ್ದಿ, ಗದಗ**

ನರಗುಂದ ತಾಲೂಕಿನ ಆಯ್ದ ನಾಲ್ಕು ಗ್ರಾಮ ಪಂಚಾಯಿತಿಗಳ ವ್ಯಾಪ್ತಿಯಲ್ಲಿ ಕೇಂದ್ರ ಪುರಸ್ಕೃತ ಯೋಜನೆಗಳ ಸಮರ್ಪಕ ಅನುಷ್ಠಾನ ಕುರಿತು ಕಾಮಗಾರಿ ಸ್ಥಳಕ್ಕೆ ರಾಷ್ಟ್ರೀಯ ಮಟ್ಟದ ಮಾನಿಟರಿಂಗ್ ತಂಡ ಭೇಟಿ ನೀಡಿ ಗುಣಮಟ್ಟವನ್ನು ಪರಿಶೀಲಿಸಿತು. ಎನ್.ಎಲ್.ಎಂ ತಂಡದ ಸದಸ್ಯರಾದ ಬಿಪಿನ್ ತಂಬಿ ಮತ್ತು ಸುಬೈರ್. ಕೆ ಅವರು ಜಂಟಿಯಾಗಿ ಗ್ರಾ.ಪಂಗಳಿಗೆ ಭೇಟಿ ನೀಡಿ ಕಾಮಗಾರಿಗಳು ಮತ್ತು ದಾಖಲೆಗಳನ್ನು ಪರಿಶೀಲಿಸಿದರು.

ಎರಡು ದಿನಗಳವರೆಗೆ ನರಗುಂದ ತಾಲೂಕಿಗೆ ಭೇಟಿ ನೀಡಿರುವ ಎನ್.ಎಲ್.ಎಂ ತಂಡದ ಸದಸ್ಯರು ಸೋಮವಾರ ಮತ್ತು ಮಂಗಳವಾರ ಕೊಣ್ಣೂರು, ಶಿರೋಳ, ಹದಲಿ ಹಾಗೂ ಬನಹಟ್ಟಿ ಗ್ರಾಮ ಪಂಚಾಯತಗಳಿಗೆ ಭೇಟಿ ನೀಡಿದರು. ಭೇಟಿ ಸಂದರ್ಭದಲ್ಲಿ ನರೇಗಾ ಫಲಾನುಭವಿಗಳು, ಸಂಜೀವಿನಿ ಮಹಿಳಾ ಒಕ್ಕೂಟದ ಸದಸ್ಯರು ಹಾಗೂ ವಸತಿ ಯೋಜನೆಯ ಫಲಾನುಭವಿಗಳ ಜೊತೆ ಸಮಾಲೋಚನೆ ನಡೆಸಿ ಅಭಿಪ್ರಾಯ ಸಂಗ್ರಹ ಮಾಡಿಕೊಂಡರು.

2022-23 ಮತ್ತು 2023-24ರ ಸಾಲಿನಲ್ಲಿ ಮುಕ್ತಾಯಗೊಂಡ ಕೇಂದ್ರ ಸರ್ಕಾರದ ಯೋಜನೆಗಳ ಕಾಮಗಾರಿಗಳ ಆಯ್ದ ಸ್ಥಳಕ್ಕೆ ಭೇಟಿ ನೀಡಿ ಗುಣಮಟ್ಟವನ್ನು ಪರಿಶೀಲಿಸಿ ಮಾಹಿತಿ ಸಂಗ್ರಹಿಸಿದರು. ಬಳಿಕ ಯೋಜನೆಯ ಫಲಾನುಭವಿಗಳನ್ನು ಸಂದರ್ಶಿಸಿ ಯೋಜನೆಯ ಉದ್ದೇಶ ಮತ್ತು ಕೇಂದ್ರ ಸರ್ಕಾರದ ಯೋಜನೆಗಳಿಂದ ಫಲಾನುಭವಿಗಳಿಗೆ ಇರುವ ಸೌಲಭ್ಯಗಳ ಬಗ್ಗೆ ಕೂಲಿಕಾರ್ಮಿಕರಲ್ಲಿ ಜಾಗೃತಿ ಮೂಡಿಸಲಾಗಿದೆಯೇ ಎಂಬುದರ ಕುರಿತು ಪರಿಶೀಲಿಸಿದರು.

ಕೇಂದ್ರ ಸರ್ಕಾರದ ಯೋಜನೆಗಳಾದ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆ, ರಾಷ್ಟ್ರೀಯ ಸಾಮಾಜಿಕ ನೆರವು ಕಾರ್ಯಕ್ರಮ,



ರಾಷ್ಟ್ರೀಯ ಗ್ರಾಮೀಣ ಜೀವನೋಪಾಯ ಮಿಷನ್, ಪ್ರಧಾನ ಮಂತ್ರಿ ಗ್ರಾಮ ಸಡಕ್ ಯೋಜನೆ, ಪ್ರಧಾನಮಂತ್ರಿ ಕೃಷಿ ಸಿಂಚಾಯಿ ಯೋಜನೆ ಸೇರಿದಂತೆ ಪ್ರಮುಖ ಕೇಂದ್ರ ಸರ್ಕಾರದ ಯೋಜನೆಗಳಡಿ ಮುಕ್ತಾಯಗೊಂಡ ಕಾಮಗಾರಿಗಳ ಸ್ಥಳಗಳಿಗೆ ಭೇಟಿ ನೀಡಿ ಸಮರ್ಪಕವಾಗಿ ಕಾಮಗಾರಿಗಳು ಅನುಷ್ಠಾನವಾಗಿರುವ ಬಗ್ಗೆ ಪರಿಶೀಲಿಸಿದರು.

ಯೋಜನೆಯಡಿ ಫಲಾನುಭವಿಗಳು ಪಡೆದುಕೊಂಡ ಸವಲತ್ತುಗಳನನು ಪರಿಶೀಲಿಸಿ ಯೋಜನೆಯಡಿ ಫಲಾನುಭವಿಗಳು ಆರ್ಥಿಕವಾಗಿ, ಸಾಮಾಜಿಕವಾಗಿ ಸ್ವಾವಲಂಬಿ ಜೀವನ ನಡೆಸುತ್ತಿದ್ದಾರೆಯೇ ಎಂಬುದರ ಕುರಿತು ಸಮಾಲೋಚಿಸಿದರು. ಸಂಜೀವಿನಿ ಒಕ್ಕೂಟದಿಂದ ಮಹಿಳೆಯರು ನಡೆಸುತ್ತಿರುವ ಗುಡಿ ಕೈಗಾರಿಕೆಗಳು ಗ್ರಾಮೀಣ ಪ್ರದೇಶದಲ್ಲಿ ಮಹಿಳಾ ಪ್ರಧಾನ ಕುಟುಂಬಗಳನ್ನು ಆರ್ಥಿಕವಾಗಿ ಸಬಲರನ್ನಾಗಿಸಿವೆಯೇ ಎಂಬುದನ್ನು ಪರಿಶೀಲಿಸಿದರು.

> ಭೇಟಿ ಸಂದರ್ಭದಲ್ಲಿ ಪ್ರತಿ ಗ್ರಾ.ಪಂ ವ್ಯಾಪ್ತಿಯಲ್ಲಿ 5 ನರೇಗಾ ಕೂಲಿಕಾರರನ್ನು ಭೇಟಿಯಾಗಿ ಉದ್ಯೋಗ ಚೀಟಿ ಪರಿಶೀಲಿಸಿದರು. ಉದ್ಯೋಗ ಚೀಟಿಯಲ್ಲಿ ಕೂಲಿಕಾರರು ಕೆಲಸ ಮಾಡಿದ ವಿವರವನ್ನು ದಾಖಲಿಸಲಾಗಿದೆಯೇ ಎಂದು ಪರಿಶೀಲಿಸಿ ನರೇಗಾ ಯೋಜನೆಯಡಿ ಫಲಾನುಭವಿಗಳಿಗಿರುವ ಸೌಲಭ್ಯಗಳ ಬಗ್ಗೆ ಕೂಲಿಕಾರರಿಂದ ಮಾಹಿತಿ ಪಡೆದುಕೊಂಡರು.

ತಾಲೂಕಿಗೆ ಎರಡು ದಿನಗಳ ಕಾಲ ಭೇಟಿ ನೀಡಿದ ನ್ಯಾಷನಲ್ ಲೆವಲ್ ಮಾನಿಟರಿಂಗ್ ಟೀಂನ್ನು ನರಗುಂದ ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿಗಳಾದ ಎಸ್.ಕೆ. ಇನಾಮದಾರ ಮತ್ತು ಗ್ರಾಮೀಣ ಉದ್ಯೋಗ ಸಹಾಯಕ ನಿರ್ದೇಶಕರಾದ ಸಂತೋಷಕುಮಾರ್ ಪಾಟೀಲ್ ಸ್ವಾಗತಿಸಿದರು.

ಈ ಸಂದರ್ಭದಲ್ಲಿ ಪಿಡಿಓ ಗಳಾದ ಮಂಜುನಾಥ ಗಣಿ, ವಾಯ್.ಬಿ. ಸಂಕನಗೌಡರ, ಬಿ.ಎಸ್. ಮೆಣಸಗಿ, ನರೇಗಾ ವಿಭಾಗದ ತಾಲೂಕು ಐಇಸಿ ಸಂಯೋಜಕ ಸುರೇಶ ಬಾಳಿಕಾಯಿ, ತಾಂತ್ರಿಕ ಸಹಾಯಕ ಹನಮಂತ ಡಂಬಳ, ತಾಲೂಕು ಸಂಜೀವಿನಿ ಒಕ್ಕೂಟದ ಅಧಿಕಾರಿ ಮೋಹನಕೃಷ್ಣ, ವಸತಿ ನೋಡಲ್ ಅಧಿಕಾರಿ ವಿನಾಯಕ್ ಬೋವಿ ಹಾಗೂ ಗ್ರಾ.ಪಂಗಳ ಸಿಬ್ಬಂದಿ ವರ್ಗ ಹಾಗೂ ನರೇಗಾ ಸಿಬ್ಬಂದಿ ವರ್ಗ ಹಾಜರಿದ್ದರು.

### ಶಿಕ್ಷಣ ಸಚಿವರಿಗೆ ಸಭಾಪತಿ ಬಸವರಾಜ ಹೊರಟ್ಟಿಯವರ ಸಲಹೆ

# ಗುಣಮಟ್ಟದ ಶಿಕ್ಷಣಕ್ಕೆ ಆದ್ಯತೆ ನೀಡಿ

**■ವಿಜಯಸಾಕ್ಷಿ ಸುದ್ದಿ, ಬೆಂಗಳೂರು**

ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಕಲಿಕೆಯಲ್ಲಿ ಗುಣಮಟ್ಟದ ಹಾಗೂ ಉತ್ಕೃಷ್ಟ ಶಿಕ್ಷಣಕ್ಕೆ ಹೆಚ್ಚು ಒತ್ತು ನೀಡುವಂತೆ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರಾದ ಮಧು ಬಂಗಾರಪ್ಪ ಅವರಿಗೆ ಸಭಾಪತಿ ಬಸವರಾಜ ಹೊರಟ್ಟಿಯವರು ಸಲಹೆ ನೀಡಿದರು.

ಬೆಂಗಳೂರಿನ ತಮ್ಮ ಕಛೇರಿಯಲ್ಲಿ ಶಿಕ್ಷಣ ಸಚಿವರಾದ ಮಧು ಬಂಗಾರಪ್ಪ ಹಾಗೂ ಹಿರಿಯ ಅಧಿಕಾರಿಗಳ ಜೊತೆ ಪ್ರಸ್ತುತ ಜ್ವಲಂತ ಸಮಸ್ಯೆಗಳ ಕುರಿತು ಚರ್ಚಿಸಿದರು. ಶಿಕ್ಷಕರ ನೇಮಕಾತಿ, ಎಸ್.ಎಸ್.ಎಲ್.ಸಿ. ಪರೀಕ್ಷಾ ವ್ಯವಸ್ಥೆ, ದೈನಂದಿನ ಶೈಕ್ಷಣಿಕ ಆಡಳಿತ ವ್ಯವಸ್ಥೆಯಲ್ಲಿ ಹಲವಾರು ಬದಲಾವಣೆಗಳನ್ನು ತರುವ ಮೂಲಕ ಗುಣಮಟ್ಟದ ಶಿಕ್ಷಣವನ್ನು ತರಲು ಸಾಧ್ಯವಾಗುತ್ತದೆ. ಆ ನಿಟ್ಟಿನಲ್ಲಿ ಶಿಕ್ಷಣ ಸಚಿವರು ಹಾಗೂ ಅಧಿಕಾರಿಗಳು ಕ್ರಮ ಕೈಗೊಳ್ಳಬೇಕು. ಇತ್ತೀಚೆಗೆ



ಸಾಕಷ್ಟು ಪ್ರಮಾಣದಲ್ಲಿ ಮಳೆಯಾಗಿ ಶಾಲಾ ಕಟ್ಟಡಗಳು, ಶಾಲಾ ಮೈದಾನಗಳು ಹಾನಿಗೊಳಗಾಗಿವೆ ಕೆಲ ಶಾಲೆಗಳಂತೂ ಸಂಪೂರ್ಣವಾಗಿ ನೀರಿನಲ್ಲಿಯೇ ಮುಳುಗಿ ಪಾಠ-ಪ್ರವಚನಕ್ಕೆ ತೊಂದರೆಯಾಗಿದೆ. ಈ ವಿಷಯದತ್ತ ಹೆಚ್ಚು ಗಮನಹರಿಸಿ ಮಕ್ಕಳ ಕಲಿಕೆಗೆ ತೊಂದರೆಯಾಗದಂತೆ ನೋಡಿಕೊಳ್ಳಬೇಕು. ಅಲ್ಲದೇ ಮೂಲಭೂತ ಸೌಕರ್ಯಗಳನ್ನು ರಾಜ್ಯದ ಎಲ್ಲ ಶಾಲೆಗಳಿಗೆ ಒದಗಿಸಬೇಕು. ಮಕ್ಕಳ ಕಲಿಕೆಯ ವಿಷಯದಲ್ಲಿ ಸರಕಾರಿ ಹಾಗೂ ಖಾಸಗಿ ಎಂಬ ಬೇಧ-ಭಾವ ಮಾಡದೇ ಮಕ್ಕಳನ್ನು ಗಮದಲ್ಲಿಟ್ಟುಕೊಂಡು ಎಲ್ಲ ಅನುಕೂಲತೆಗಳನ್ನು ಕಲ್ಪಿಸಬೇಕು.

> ಮಾತೃ ಭಾಷೆಯಲ್ಲಿ ಭೋದಿಸುತ್ತಿರುವ ಶಾಲೆಗಳು ಕಡಿಮೆಯಾಗುತ್ತಿರುವುದರಿಂದ ಕನ್ನಡ ಭಾಷೆಗೆ ಕಂಟಕಗಳು ಎದುರಾಗುತ್ತಿವೆ. ಈ ವಿಷಯದತ್ತ ಸಚಿವರು ಹೆಚ್ಚು ಗಮನ ಹರಿಸುವುದು ಸೂಕ್ತ. ಕನ್ನಡ ಭಾಷೆ ಉಳಿಯಬೇಕಾದರೆ ಕನ್ನಡ ಮಾಧ್ಯಮ ಶಾಲೆಗಳನ್ನು ಉಳಿಸಿಕೊಂಡು ಹೋಗಬೇಕು. ದಶಕಗಳಿಂದ ಕನ್ನಡ ಮಾಧ್ಯಮದಲ್ಲಿಯೇ ಶಾಲೆ ನಡೆಸುತ್ತ ಬಂದಿರುವ ಖಾಸಗಿ ಶಾಲೆಗಳನ್ನು ಅನುದಾನಕ್ಕೆ ಒಳಪಡಿಸಬೇಕು. ಆ ಮೂಲಕ ಕನ್ನಡ ಭಾಷೆಯನ್ನು ಉಳಿಸುವುದರ ಜೊತೆಗೆ ಕನ್ನಡ ಕಟ್ಟುವ ಕೆಲಸವನ್ನು ಕೂಡ ಮಾಡಿದಂತಾಗುತ್ತದೆ ಎಂದರು.

ಸಚಿವ ಮಧು ಬಂಗಾರಪ್ಪನವರು ಹೊರಟ್ಟಿ ಅವರು ನೀಡಿದ ಎಲ್ಲ ಸಲಹೆಗಳನ್ನು ಅತ್ಯಂತ ಸಮಾಧಾನದಿಂದ ಆಲಿಸಿ ತಮ್ಮ ಮಾರ್ಗದರ್ಶನದಲ್ಲಿಯೇ ಈ ಎಲ್ಲ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳುವುದರ ಜೊತೆಗೆ ಶೈಕ್ಷಣಿಕ ಕ್ಷೇತ್ರದಲ್ಲಿ ತೊಂದರೆ ಯಾಗದಂತೆ ನೋಡಿ ಕೊಳ್ಳುವುದಾಗಿ ಹೇಳಿದರು.

ಈ ಸಂದರ್ಭದಲ್ಲಿ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಇಲಾಖೆಯ ಪ್ರಧಾನ ಕಾರ್ಯದರ್ಶಿಗಳಾದ ರಿತೇಶಕುಮಾರ ಸಿಂಗ್, ಸಭಾಪತಿ ಅವರ ವಿಶೇಷ ಕರ್ತವ್ಯಾಧಿಕಾರಿ ಡಾ. ಮಹೇಶ ವಾಳ್ವೇಕರ, ಎಚ್.ಡಿ. ಪಾಟೀಲ ಸೇರಿದಂತೆ ಶಿಕ್ಷಣ ಇಲಾಖೆಯ ಉನ್ನತ ಅಧಿಕಾರಿಗಳು ಹಾಗೂ ಕರ್ನಾಟಕ ವಿಧಾನ ಪರಿಷತ್ತಿನ ಅಧಿಕಾರಿ ವೃಂದ ಉಪಸ್ಥಿತರಿದ್ದರು.

# ಪುನೀತ್ ರಾಜಕುಮಾರ್ ಅಜರಾಮರ



**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ತಾಲೂಕಿನ ಶಿಗ್ಲಿ ಗ್ರಾಮದಲ್ಲಿ ಅಪ್ಪು ಅಭಿಮಾನಿ ಬಳಗದಿಂದ ಕನ್ನಡ ಚಲನಚಿತ್ರ ನಟ ದಿ.ಪುನಿತ್ ರಾಜಕುಮಾರ್ ಅವರ 3ನೇ ವರ್ಷದ ಪುಣ್ಯಸ್ಮರಣೆಯನ್ನು ವಿಶೇಷವಾಗಿ ಆಚರಿಸಿದರು. ಶಿಗ್ಲಿ ಗ್ರಾಮದ ಗಾಂಧಿ ನಗರದ ಕೊರಮ-ಕೊರಚ ಸಮಾಜದ ಅಪ್ಪು ಅಭಿಮಾನಿಗಳು ಬೃಹತ್ ಕಟೌಟ್ ಅಳವಡಿಸಿ ಹೂವಿನ ಹಾರ, ಜೈಕಾರ ಹಾಕಿ ಅಪ್ಪು ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ, ಆರತಿ ಬೆಳಗಿ, ನಮನ ಸಲ್ಲಿಸಿದರಲ್ಲದೆ ನೂರಾರು ಜನರಿಗೆ ಪುನೀತ್ ಹೆಸರಲ್ಲಿ ಊಟ ಉಣಬಡಿಸಿದರು.

ಗ್ರಾಮದ ಕೊರವರ ಸಮಾಜದ ಪ್ರತಿಯೊಂದು ಮನೆಯಲ್ಲಿ ಅಪ್ಪು ಅಭಿಮಾನಿಗಳಿದ್ದಾರೆ. ಹೀಗಾಗಿ ಪುಣ್ಯಸ್ಮರಣೆ ಕಾರ್ಯಕ್ರಮವನ್ನು ಅನ್ನಸಂತರ್ಪಣೆ ಮಾಡುವ ಮೂಲಕ ಅರ್ಥಪೂರ್ಣವಾಗಿ ಆಚರಿಸುತ್ತಿದ್ದಾರೆ. ಈ ಕುರಿತು ಅಪ್ಪು ಅಭಿಮಾನಿ ಬಳಗದ ರಾಘು ಪೂಜಾರ ನುಡಿ ನಮನ ಸಲ್ಲಿಸಿ, ಕೋಟ್ಯಾಂತರ ಅಭಿಮಾನಿಗಳ ಹೃದಯ ಗೆದ್ದ ರಾಜಕುಮಾರ ನಮ್ಮನ್ನಗಲಿ 3 ವರ್ಷಗಳು ಕಳೆದಿವೆ. ಆದರೆ, ಅಭಿಮಾನಿಗಳ ಮನದಲ್ಲಿ ಅಪ್ಪು ಇನ್ನೂ ಅಜರಾಮರವಾಗಿದ್ದಾರೆ ಎಂದರು.

ಪುನೀತ್ ರಾಜಕುಮಾರರ ಪ್ರತಿಯೊಂದು ಚಿತ್ರಗಳು ಸಮಾಜಕ್ಕೆ ಅದರಲ್ಲೂ ಯುವಜನತೆಗೆ ಉತ್ತಮ ಸಂದೇಶ ನೀಡಿವೆ. ಅವರು ತೆರೆಮರೆಯಲ್ಲಿ ಯಾರಿಗೂ ಗೊತ್ತಾಗದಂತೆ ಮಾಡಿದ ಅನೇಕ ಸಾಮಾಜಿಕ ಕಾರ್ಯಗಳು ನಮಗೆ ಸ್ಫೂರ್ತಿಯಾಗಿವೆ. ಹೀಗಾಗಿ ಅಪ್ಪು ಅವರ ಪುಣ್ಯಸ್ಮರಣೆ ಕಾರ್ಯಕ್ರಮದಲ್ಲಿ ಅನ್ನಸಂತರ್ಪಣೆ ಸೇರಿ ಹಲವು ಸಾಮಾಜಮುಖಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದರು.

ಈ ಸಂದರ್ಭದಲ್ಲಿ ಗಂಗಪ್ಪ ಪೂಜಾರ, ವೆಂಕಟೇಶ ಗೌಳಿ, ದ್ಯಾಮಣ್ಣ ಹುರಳಿಕುಪ್ಪಿ, ಗಾಳೆಪ್ಪ ಪೂಜಾರ, ಮಾದೇವಪ್ಪ ಹರದಗಟ್ಟಿ, ಗಂಗಪ್ಪ ಕುರಿ, ವೆಂಕಟೇಶ ಮುಂಡರಗಿ, ಸುರೇಶ ಹರದಗಟ್ಟಿ, ಅಶೋಕ ಪೂಜಾರ ಸೇರಿ ಸಮಾಜದ ಯುವಕರು, ಮಕ್ಕಳು ಪಾಲ್ಗೊಂಡಿದ್ದರು.

### ದೀಪ ಸಂಜೀವಿನಿ ಕಾರ್ಯಕ್ರಮದಲ್ಲಿ ರವಿಕುಮಾರ್ ಅಯೋಧ್ಯ

# ಮಹಿಳೆಯರ ಸಬಲೀಕರಣಕ್ಕೆ ಸಂಜೀವಿನಿ ಸ್ವಸಹಾಯ ಸಂಘ ಸಹಕಾರಿ

**■ವಿಜಯಸಾಕ್ಷಿ ಸುದ್ದಿ, ಕೊಪ್ಪಳ**

ಮಹಿಳೆಯರು ಆರ್ಥಿಕ ಸ್ವಾವಲಂಬಿಗಳಾಗಿ ಬದುಕಲು ಹಾಗೂ ಮಹಿಳೆಯರ ಸಬಲೀಕರಣಕ್ಕೆ ಸಂಜೀವಿನಿ ಸ್ವಸಹಾಯ ಸಂಘ ಸಹಕಾರಿಯಾಗಿದೆ ಎಂದು ತಾ.ಪಂ ಲೆಕ್ಕಾಧಿಕಾರಿ ರವಿಕುಮಾರ್ ಅಯೋಧ್ಯ ಅಭಿಪ್ರಾಯ ಪಟ್ಟರು.

ದೀಪಾವಳಿ ಹಬ್ಬದ ಪ್ರಯುಕ್ತ ನಗರದ ತಾಲೂಕ ಪಂಚಾಯತ್ ಮುಂಭಾಗದಲ್ಲಿ ಮಂಗಳವಾರ ಆಯೋಜನೆ ಮಾಡಿದ್ದ ದೀಪ ಸಂಜೀವಿನಿ ಕಾರ್ಯಕ್ರಮವ ಚಾಲನೆ ನೀಡಿ ಮಾತನಾಡಿದರು.

ಮಹಿಳೆಯರು ತಯಾರಿಸಿದ ಉತ್ಪನ್ನಗಳಿಗೆ ಉತ್ತಮ ವೇದಿಕೆ ಕಲ್ಪಿಸುವ ಜೊತೆಗೆ ಆದಾಯವನ್ನು ಹೆಚ್ಚಿಸಿದಂತಾಗಿದೆ. ಇದರಿಂದ ಮಹಿಳೆಯರ ಸಬಲೀಕರಣ



ಸಾಧ್ಯವಾಗುತ್ತಿದೆ ಎಂದು ಹೇಳಿದರು.

ತಾ. ಪಂ. ಸಹಾಯಕ ನಿರ್ದೇಶಕ ಮಹೇಶ್ ಎಚ್ ಮಾತನಾಡಿ ಮಹಿಳಾ ಸ್ವಸಹಾಯ ಸಂಘಗಳ ಸದಸ್ಯರು ಆರ್ಥಿಕವಾಗಿ ಹಾಗೂ ಸಾಮಾಜಿಕವಾಗಿ ಸಬಲರಾಗಲು ಸಂಜೀವಿನಿ ಕಾರ್ಯಕ್ರಮ ಪ್ರಮುಖ ಪಾತ್ರ ವಹಿಸುತ್ತಿವೆ. ಬೆಳಕಿನ ಹಬ್ಬ ದೀಪಾವಳಿಗೆ ಸ್ವಸಹಾಯ ಸಂಘಗಳ ಮಹಿಳೆಯರು ಆಕರ್ಷಕ ದೀಪಗಳನ್ನು ತಯಾರಿಸಿದ್ದಾರೆ. ಅವರಿಗೆ ಮಾರುಕಟ್ಟೆ ಒದಗಿಸುವುದು, ಸ್ವದೇಶಿ ಉತ್ಪನ್ನಗಳನ್ನು ಬೆಂಬಲಿಸುವ ಮೂಲಕ ಅವರ ಸ್ವಾವಲಂಬಿ ನಡೆಗಳನ್ನು ಪ್ರೋತ್ಸಹಿಸುವುದೇ ಮುಖ್ಯ ಉದ್ದೇಶವಾಗಿದೆ ಎಂದು ಹೇಳಿದರು.

ಸದರಿ ಕಾರ್ಯಕ್ರಮದಲ್ಲಿ ವಿವಿಧ ಸಿಹಿ ತಿನಿಸು, ಬಟ್ಟೆ ವ್ಯಾಪಾರ, ಬಳೆ ವ್ಯಾಪಾರ, ಖಾರದ ಪುಡಿ ವ್ಯಾಪಾರ, ಕಸೂತಿ ಸೇರಿದಂತೆ ಕರಕುಶಲ ವಸ್ತುಗಳು ಹಾಗೂ ದೀಪಾವಳಿ ಹಬ್ಬದ ಪ್ರಯುಕ್ತ ಸ್ವ ಸಹಾಯ ಗುಂಪಿನ ಮಹಿಳೆಯರು ತಯಾರಿಸಿದ ಆಕರ್ಷಕ ದೀಪ ಇಡಲಾಗಿತ್ತು.

ಈ ಸಂದರ್ಭದಲ್ಲಿ ತಾ.ಪಂ. ವ್ಯವಸ್ಥಾಪಕ ಬಸವರಾಜ್ ಪಾಟೀಲ್, ತಾಲೂಕ ಯೋಜನಾಧಿಕಾರಿ ರಾಜೆಸಾಬ್ ನದಾಫ್, ತಾಲೂಕ ಪಂಚಾಯತ್ ಸಿಬ್ಬಂದಿ ಸೇರಿದಂತೆ ಸ್ವಸಹಾಯ ಸಂಘದ ಮಹಿಳೆಯರು ಉಪಸ್ಥಿತರಿದ್ದರು.

# ನೌಕರ ಸಂಘದ ಪದಾಧಿಕಾರಿಗಳ ಆಯ್ಕೆ

**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ರಾಜ್ಯ ಸರ್ಕಾರಿ ನೌಕರರ ಸಂಘದ ಲಕ್ಷ್ಮೇಶ್ವರ ತಾಲೂಕು ಘಟಕದ ಪದಾಧಿಕಾರಿಗಳ ಆಯ್ಕೆಗೆ ಸೋಮವಾರ ಪಟ್ಟಣದ ಸರ್ಕಾರಿ ಪ್ರಾಥಮಿಕ ಶಾಲೆ ನಂ. 1ರಲ್ಲಿ ಚುನಾವಣೆ ನಡೆಯಿತು. ವಿವಿಧ ಇಲಾಖೆಗಳ ಸರ್ಕಾರಿ ನೌಕರರ ಸಂಘದ ಒಟ್ಟು 20 ಸದಸ್ಯರ ಆಯ್ಕೆ ಪ್ರಕ್ರಿಯೆಯಲ್ಲಿ 15 ಸದಸ್ಯರು ಅವಿರೋಧವಾಗಿ ಆಯ್ಕೆಯಾಗಿದ್ದರು.

ಉಳಿದ 3 ಇಲಾಖೆಗಳಲ್ಲಿ ಪ್ರಾಥಮಿಕ ಶಾಲಾ ಶಿಕ್ಷಕರ 3 ಸದಸ್ಯರು, ಪ್ರೌಢಶಾಲಾ ಶಿಕ್ಷಕರ ಸಂಘದ ಒಬ್ಬ ಸದಸ್ಯರು ಹಾಗೂ ನ್ಯಾಯಾಂಗ ಇಲಾಖೆಯ ಒಂದು ಸ್ಥಾನಕ್ಕೆ ಚುನಾವಣೆ ನಡೆಯಿತು. ಪ್ರಾಥಮಿಕ ಶಾಲಾ ಶಿಕ್ಷಕರ ವತಿಯಿಂದ 5 ಸದಸ್ಯರು



ಚುನಾವಣೆಗೆ ಸ್ಪರ್ಧಿಸಿದ್ದರು. ಇದರಲ್ಲಿ ಎಂ.ಡಿ. ವಾರದ 222, ಬಿ.ಎಂ. ಯರಗುಪ್ಪಿ 207 ಹಾಗೂ ಎಂ.ಎ. ನದಾಫ್ 190 ಮತ ಪಡೆದು ಆಯ್ಕೆಯಾದರು. ಡಿ.ಎಂ. ಶಿರುಂಜ 88, ಡಿ.ಎಂ. ದೊಡ್ಡಮನಿ 131 ಮತ ಪಡೆದು ಪರಾಭವಗೊಂಡರು.

ಪ್ರೌಢಶಾಲಾ ಶಿಕ್ಷಕರ ವತಿಯಿಂದ ಎ.ಎಂ. ಅಕ್ಕಿ 47 ಮತ ಪಡೆದು ಆಯ್ಕೆಯಾದರೆ, ಎಸ್.ಜಿ. ಅಂಗಡಿ 38 ಮತ ಪಡೆದು ಪರಾಭವಗೊಂಡರು. ನ್ಯಾಯಾಂಗ ಇಲಾಖೆಯ ಆನಂದ ಕರ್ಜಗಿ 29 ಮತ ಪಡೆದು ಆಯ್ಕೆಯಾದರೆ ಕುಮಾರ ಬಟ್ಟೂರ 14 ಮತ ಪಡೆದು ಪರಾಭವಗೊಂಡಿದ್ದಾರೆ ಎಂದು ಚುನಾವಣಾಧಿಕಾರಿ ಎ.ಎಂ. ಮಠದ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಆರೋಗ್ಯ ಜಾಗೃತಿ, ರಕ್ತದ ಗುಂಪು ತಪಾಸಣೆ ಕಾರ್ಯಕ್ರಮದಲ್ಲಿ ಡಾ.ರಾಮಚಂದ್ರ

# ಸರಿಯಾದ ಆರೋಗ್ಯ ಕ್ರಮ ಅನುಸರಿಸಿ

**■ವಿಜಯಸಾಕ್ಷಿ ಸುದ್ದಿ, ಗದಗ**

ಪೌಷ್ಠಿಕ ಆಹಾರ ಸೇವನೆಯಿಂದ ಸದೃಢ ಆರೋಗ್ಯ ಪಡೆಯಬಹುದು. ಮಕ್ಕಳು ಹಿತಮಿತ ಆಹಾರ ಸೇವನೆ. ಸರಿಯಾದ ಆರೋಗ್ಯ ಕ್ರಮಗಳನ್ನು ಅನುಸರಿಸಬೇಕೆಂದು ಡಾ.ರಾಮಚಂದ್ರ ಹಂಸನೂರ ಹೇಳಿದರು.

ಅವರು ಮಂಗಳವಾರ ಗದಗ ಭಾವಸಾರ ವಿಜನ್‌ದಿಂದ ನಗರದ ಸಿ.ಎಸ್. ಪಾಟೀಲ ಹೆಣ್ಣು ಮಕ್ಕಳ ಪ್ರಾಥಮಿಕ ಶಾಲೆಯಲ್ಲಿ ಜರುಗಿದ ಆರೋಗ್ಯ ಜಾಗೃತಿ ಹಾಗೂ ವಿದ್ಯಾರ್ಥಿಗಳಿಗೆ ರಕ್ತದ ಗುಂಪು ಗುರುತಿಸುವಿಕೆ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ



ಮಾತನಾಡಿದರು.

ಕುರುಕಲು ತಿಂಡಿಗಳು, ತಂಪು ಪಾನೀಯಗಳು ಆರೋಗ್ಯಕ್ಕೆ ಹಾನಿಯನ್ನುಂಟು ಮಾಡುತ್ತವೆ. ಇದರ ಬದಲಾಗಿ ಮಕ್ಕಳು ಸತ್ವಯುತವಾದ ಆಹಾರ ಸೇವನೆ, ನಿರ್ದಿಷ್ಟ ವ್ಯಾಯಾಮಗಳನ್ನು ರೂಢಿಸಿಕೊಳ್ಳಬೇಕು ಎಂದರು.

ರಕ್ತ ತಪಾಸಿಗ ಡಾ.ದತ್ತಾತ್ರೇಯ ವೈಕುಂಠೆ ಮಾತನಾಡಿ, ಹಸಿರು ಕಾಯಿಪಲ್ಲೆಗಳು, ಮೊಳಕೆ ಕಾಳುಗಳು ಆರೋಗ್ಯಕ್ಕೆ ಪೂರಕವಾಗಿವೆ. ಊಟ ಮಾಡುವಾಗ ಮಕ್ಕಳು ತರಕಾರಿಗಳನ್ನು ಸೇವಿಸುವದನ್ನು ರೂಢಿಸಿಕೊಳ್ಳಬೇಕು ಎಂದರು.

ವೇದಿಕೆಯ ಮೇಲೆ ಗದಗ ಭಾವಸಾರ ವ್ಹಿಜನ್‌ದ ಆರ್.ಎಸ್. ತ್ರಿಮಲ್ಲೇ ಹಾಗೂ ಜಯಶ್ರೀ ತ್ರಿಮಲ್ಲೆ ಉಪಸ್ಥಿತರಿದ್ದರು. ಸಂಪನ್ಮೂಲ ವ್ಯಕ್ತಿ ಕೆ.ಎಸ್. ಬೇಲೇರಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಎಚ್.ಪಿ. ಹಿರೇಮಠ ಸ್ವಾಗತಿಸಿದರು, ಎಸ್.ಎಂ. ತಳವಾರ ನಿರೂಪಿಸಿದರು. ಜಿ.ಸಿ.ಪಾಟೀಲ ವಂದಿಸಿದರು, ಕೆ.ಬಿ. ಬಾಗೇವಾಡಿ, ವ್ಹಿ.ಎಚ್. ಪಾಟೀಲ, ಉಮಾ ದಾನೇಶ್ವರಮಠ, ಎಂ.ಎಸ್. ಪಾಟೀಲ, ವಿಜಯಲಕ್ಷ್ಮೀ ಪೂಜಾರ, ವ್ಹಿ.ವ್ಹಿ. ಪಾಟೀಲ, ನೀಲಾ ಪಲ್ಲೇದ, ಶಾರದಾ ವಡ್ಡಿನ, ಗೀತಾ ದಾನೇಶ್ವರಮಠ, ಬಸಮ್ಮ ಅರಳಿಕಟ್ಟಿ, ಸಾವಿತ್ರಿ ಕಾತರಕಿ, ಕಸ್ತೂರಿ ಕಟ್ಟಿಮನಿ ಲಕ್ಷ್ಮವ್ವ ನಾಯಕ ಮುಂತಾದವರಿದ್ದರು.

ವಿದ್ಯಾರ್ಥಿಗಳು ಹಾಗೂ ಶಾಲಾ ಸಿಬ್ಬಂದಿ ಸೇರಿದಂತೆ ಸುಮಾರು 150ಕ್ಕೂ ಹೆಚ್ಚು ಜನರ ರಕ್ತದ ಗುಂಪು ತಪಾಸಣೆ ನಡೆಸಿ ಚೀಟಿ ವಿತರಿಸಲಾಯಿತು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka